# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 40 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 24–08–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 40 | Title- Code: KARKAN 28269 | Chitradurga | Date: 24-08-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು
ವಿಚಾರಣಾಧಿನ ಆರೋಪಿ ಹುಚ್ಚಾಟ; ಕಿಟಕಿ ಗ್ಲಾಸ್ ಹೊಡೆದು ಹಾಕಿ ಕೂಗಾಟ 2
ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ಕರ ವಸೂಲಿಗೆ ವಿಶೇಷ ಅಂದೋಲನ 3
ಮೊಳಕಾಲ್ಮುರು ಪಟ್ಟಣ ಪಂಚಾಯ್ತಿ ಗದ್ದುಗೆ ಏರಿದ ಬಿಜೆಪಿ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### 27ರಂದು ನಿಷೇಧಾಜ್ಞೆ ಜಾರಿ

» ಚಿತ್ರದುರ್ಗ

ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ಗೆಜೆಟೆಡ್ ಪ್ರೋಬೇಷನರ್ಸ್ ಗ್ರೂಪ್–ಎ ಮತ್ತು ಗ್ರೂಪ್–ಬಿ ವೃಂದದ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯು ಇದೇ ಆಗಸ್ಟ್ 27ರಂದು ಚಿತ್ರದುರ್ಗ ನಗರದ 24 ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದೆ. ಪರೀಕ್ಷಾ ಕೇಂದ್ರಗಳಲ್ಲಿನ ಅವ್ಯವಹಾರ ತಡೆಗಟ್ಟುವ ಸಲುವಾಗಿ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ಆದೇಶ ಹೊರಡಿಸಿದ್ದಾರೆ. ಪರೀಕ್ಷೆ ನಡೆಯುವ ದಿನಾಂಕದಂದು ಪರೀಕ್ಷಾ ಕೇಂದ್ರಗಳ ವ್ಯಾಪ್ತಿಯಲ್ಲಿನ ಜೆರಾಕ್ಸ್ ಅಂಗಡಿ ಹಾಗೂ ಕಂಪ್ಯೂಟರ್ ಇಂಟರ್‌ನೆಟ್ ಕೇಂದ್ರಗಳನ್ನು ಬೆಳಿಗ್ಗೆ 9 ರಿಂದ ಸಂಜೆ 5 ರವರೆಗೆ ಮುಚ್ಚುವಂತೆ ಮತ್ತು ಪರೀಕ್ಷಾ ಕೇಂದ್ರಗಳಿಗೆ ಅಭ್ಯರ್ಥಿಯು ಯಾವುದೇ ಕಾರಣಕ್ಕೂ ಮೊಬೈಲ್ ಫೋನ್ ಹಾಗೂ ಇನ್ನಿತರೆ ಎಲೆಕ್ಟ್ರಾನಿಕ್ ಉಪಕರಣಗಳನ್ನು ತರದಂತೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಆದೇಶಿಸಿದ್ದಾರೆ.

### ಹಾಲು ಉತ್ಪಾದಕರ ಸಹಕಾರ ಸಂಘಗಳ ನೋಂದಣಿ ರದ್ದತಿಗೆ ಕ್ರಮ

» ಚಿತ್ರದುರ್ಗ

ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಅಮೃತಾಪುರ ತಾಳ್ಯ ಈಚಗಟ್ಟ ಗಿಲಿಕೇನಹಳ್ಳಿ ಹಾಗೂ ಗುಡ್ಡದಸಾಂತೇನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘಗಳು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರನ್ವಯ ನೋಂದಣಿಗೊಂಡಿವೆ. ಆದರೆ ಕಾಯ್ದೆ, ನಿಯಮ, ಇಲಾಖೆಯ ಸುತ್ತೋಲೆ ಹಾಗೂ ಬೈಲಾ, ರೀತ್ಯಾ ಕಾರ್ಯ ನಿರ್ವಹಿಸದೆ, ಪ್ರಸ್ತುತ ಸಮಾಪನಗೊಂಡಿರುತ್ತವೆ. ಆದ್ದರಿಂದ ಈ ಸಂಘಗಳ ನೊಂದಣಿ ಸಂಖ್ಯೆ ರದ್ದುಪಡಿಸಲು ಕ್ರಮವಹಿಸಲಾಗಿದೆ. ಸಂಬಂಧಿಸಿದ ಸಹಕಾರ ಸಂಘಗಳ ಷೇರುದಾರ ಸದಸ್ಯರು, ಹಿಂದಿನ ಆಡಳಿತ ಮಂಡಳಿ ಸದಸ್ಯರು ಅಥವಾ ನೌಕರರು ಇದ್ದಲ್ಲಿ ಪ್ರಕಟಣೆಯು ಪ್ರಕಟವಾದ ಏಳು ದಿನಗಳೊಳಗಾಗಿ ಹೊಳಲ್ಕೆರೆ ಪಟ್ಟಣದ ಪಿಕಾರ್ಡ್ ಬ್ಯಾಂಕ್ ಕಟ್ಟಡದಲ್ಲಿನ ಸಹಕಾರ ಅಭಿವೃದ್ಧಿ ಅಧಿಕಾರಿ ದೂರವಾಣಿ ಸಂಖ್ಯೆ 9008078964 ಗೆ ಸಂಪರ್ಕಿಸಲು ಸೂಚಿಸಿದೆ. ತಪ್ಪಿದಲ್ಲಿ ಸಂಬಂಧಿಸಿದ ಸಹಕಾರ ಸಂಘಗಳಿಗೆ ಸಂಬಂಧಪಟ್ಟವರು ಯಾರು ಇಲ್ಲವೆಂದು ಪರಿಗಣಿಸಿ ನೊಂದಣಿ ರದ್ದತಿಗಾಗಿ ಶಿಫಾರಸ್ಸಿನೊಂದಿಗೆ ಮೇಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಲಾಗುವುದು ಹೊಳಲ್ಕೆರೆ ಸಹಕಾರ ಅಭಿವೃದಿ ಅಧಿಕಾರಿ ಹಾಗೂ ಸಮಾಪನಾಧಿಕಾರಿ ತಿಳಿಸಿದ್ದಾರೆ.

### ಕ್ರೀಡಾ ರತ್ನ ಪ್ರಶಸ್ತಿಗೆ ಅರ್ಜಿ ಆಹ್ವಾನ

■ ಚಿತ್ರದುರ್ಗ

ರಾಜ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 2023ನೇ ಸಾಲಿನಲ್ಲಿ ಕ್ರೀಡಾ ಕ್ಷೇತ್ರದಲ್ಲಿ ಕ್ರೀಡಾ ಪಟುವಾಗಿ, ಕ್ರೀಡಾ ತರಬೇತುದಾರರಾಗಿ ನಿರಂತರ ಸೇವೆ ಸಲ್ಲಿಸಿ ಸಾಧನೆ ಮಾಡಿದ ಹಿರಿಯ ಕ್ರೀಡಾಪಟು, ತರಬೇತುದಾರರಿಗೆ ಜೀವನ ಪರ್ಯಂತ ಸಾಧನಾ ಪ್ರಶಸ್ತಿ ಹಾಗೂ ಗ್ರಾಮೀಣ ಕ್ರೀಡೆಗಳಲ್ಲಿ ವಿಶೇಷ ಸಾಧನೆ ಮಾಡಿದ ಕ್ರೀಡಾ ಪಟುಗಳಿಗೆ ಕರ್ನಾಟಕ ರತ್ನ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 20 ಕೊನೆಯ ದಿನವಾಗಿದೆ. ರಾಷ್ಟ್ರೀಯ, ಅಂತರಾಷ್ಟ್ರೀಯ, ಜೀವಮಾನ ಸಾಧನೆ ಮಾಡಿದ ಹಾಗೂ ಅತ್ಯುತ್ತಮ ಸಾಧನೆ ಮಾಡಿರುವ ಕ್ರೀಡಾಪಟುಗಳು ಹಾಗೂ ತರಬೇತುದಾರರು ಇಲಾಖೆಯ ಅಧಿಕೃತ ಜಾಲಾತಾಣ http://sevasindhuservicse.karnataka.gov.in ನ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.

### ಸಂಸದ ಗೋವಿಂದ ಕಾರಜೋಳ ಹೇಳಿಕೆ

# ಪಾವಗಡ–ಮಡಕಶಿರಾ ಮಾರ್ಗಕ್ಕೆ 265 ಕೋಟಿ

» ಚಿತ್ರದುರ್ಗ



ತುಮಕೂರು–ರಾಯದುರ್ಗ ನೂತನ ರೈಲುಮಾರ್ಗ ಈ ಭಾಗದ ಅತ್ಯಂತ ಮಹತ್ವದ ಯೋಜನೆಯಾಗಿದೆ, ಈ ಯೋಜನೆಯ ಭಾಗವಾಗಿ ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಪಾವಗಡದಿಂದ ಮಡಕಶಿರಾ ನಡುವಿನ 22 ಕಿ.ಮೀ ಉದ್ದದ ಹೊಸ ಬ್ರಾಡ್‌ಗೇಜ್ ರೈಲುಮಾರ್ಗ ನಿರ್ಮಾಣಕ್ಕಾಗಿ ಕೇಂದ್ರ ಸರ್ಕಾರ ರೂ.265.92 ಕೋಟಿ ಅನುದಾನ ಒದಗಿಸುವ ಮೂಲಕ ತುಮಕೂರು–ರಾಯದುರ್ಗ ಹೊಸ ಬ್ರಾಡ್‌ಗೇಜ್ ರೈಲು ಮಾರ್ಗಕ್ಕೆ ವೇಗ ನೀಡಿದೆ ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದ್ದಾರೆ.

ಈ ಬಗ್ಗೆ ಹೇಳಿಕೆಯನ್ನು ನೀಡಿರುವ ಅವರು ಈಗಾಗಲೇ ಈ ಬಗ್ಗೆ ನೈರುತ್ಯ ರೈಲ್ವೆ ವಲಯದಿಂದ ಟೆಂಡರ್ ಕರೆಯಲಾಗಿದೆ, ದಿನಾಂಕ: 11.09.2024 ರಂದು ಈ ಕಾಮಗಾರಿಯ ಬಿಡ್ ತೆರೆಯಲಿದ್ದು, ಕಾಮಗಾರಿ ನಿರ್ವಹಿಸುವ ಏಜೆನ್ಸಿ ಅಂತಿಮಗೊಳ್ಳಲಿದೆ. ಒಟ್ಟಾರೆಯಾಗಿ ಈ ಯೋಜನೆಯನ್ನು 18 ತಿಂಗಳಲ್ಲಿ ಪೂರ್ಣಗೊಳಿಸುವ ಗುರಿಯನ್ನು ರೈಲ್ವೆ ಇಲಾಖೆ ಹೊಂದಿದೆ. ಈ ಯೋಜನೆಯಡಿ ಪಾವಗಡ ಮತ್ತು ಮಡಕಶಿರಾ ನಗರಗಳಲ್ಲಿ 510ಚದುರ ಮೀಟರ್ ವಿಸ್ತೀರ್ಣದ ಸುಸಜ್ಜಿತ ರೈಲ್ವೆ ನಿಲ್ದಾಣಗಳು ನಿರ್ಮಾಣವಾಗಲಿವೆ, ಹಾಗೂ ಈ ಮಾರ್ಗದಲ್ಲಿ ತಡೆರಹಿತ ರೈಲು ಸಂಚಾರಕ್ಕೆ 3 ಪ್ರಮುಖ ಸೇತುವೆಗಳು,



32 ಸಣ್ಣ ಸೇತುವೆಗಳು, 21 RUB(Road Under Bridge) ಗಳು ಹಾಗೂ 4 ROB (Road Over Bridge) ಗಳು ನಿರ್ಮಾಣವಾಗಲಿವೆ, ಒಟ್ಟಾರೆಯಾಗಿ ಯಾವುದೇ ಅಡೆತಡೆಯಿಲ್ಲದೇ ರೈಲುಗಳು ಪ್ರತಿಗಂಟೆಗೆ 110 ಕಿ.ಮೀ ವೇಗದಲ್ಲಿ ಚಲಿಸಲು ಯಾವ ಅಗತ್ಯ ಮೂಲಸೌಕರ್ಯಗಳು ಬೇಕೋ ಆ ಎಲ್ಲವನ್ನೂ ಈ ಯೋಜನೆ ಒಳಗೊಂಡಿದೆ. ತುಮಕೂರು–ರಾಯದುರ್ಗ ನೂತನ ರೈಲು ಮಾರ್ಗ ಪೂರ್ಣಗೊಂಡರೆ ಈ ಭಾಗದಲ್ಲಿ ಆರ್ಥಿಕ ಚಟುವಟಿಕೆಗಳು ಗರಿಗೆದರಲಿವೆ ಎಂದಿದ್ದಾರೆ.

# ಮಳೆಗೆ ಈರುಳ್ಳಿ ಬೆಳೆನಾಶ ಸಮೀಕ್ಷೆಗೆ ಒತ್ತಾಯ



» ಚಿತ್ರದುರ್ಗ

ಜಿಲ್ಲೆಯಲ್ಲಿ ಇತ್ತೀಚೆಗೆ ಬಿದ್ದ ಮಳೆಯಿಂದಾಗಿ ಈರುಳ್ಳಿ ಹಾಗೂ ತೋಟಗಾರಿಕೆ ಬೆಳೆಗಳು ನಾಶವಾಗಿದ್ದು, ಬೆಳೆ ಸಮೀಕ್ಷೆಯನ್ನು ನಡೆಸಿ, ಬೆಳೆ ಪರಿಹಾರವನ್ನು ನಿಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸರ್ಕಾರವನ್ನು ಒತ್ತಾಯಿಸಿದೆ.

ಚಿತ್ರದುರ್ಗ ನಗರದಲ್ಲಿ ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಬಳಿ ಪ್ರತಿಭಟನೆಯನ್ನು ನಡೆಸಿದ ರೈತ ಸಂಘದ ಪದಾಧಿಕಾರಿಗಳು, ಜಿಲ್ಲೆಯಲ್ಲಿ ಕಳೆದ ವರ್ಷ ಬರಗಾಲದಿಂದ ತುತ್ತಾಗಿದ್ದು, ಇದರಿಂದ ರೈತರು ಸಾಲಗಾರಾಗಿದ್ದಾರೆ. ಈ ಸಾಲವನ್ನು ತೀರಿಸಲು ಸಾಹಸವನ್ನು ಪಡಬೇಕಿದೆ ಭಾರಿ ಆರಂಭದಲ್ಲಿ ಉತ್ತಮ ಮಳೆಯಾಗಿತ್ತು ಆದರೆ ಇತ್ತೀಚೇಗೆ ಸುರಿದ ಮಳೆಗೆ ಈರುಳ್ಳಿ ಮತ್ತು ತೋಟಗಾರಿಕೆ ಮುಂತಾದ ಬೆಳೆಗಳು ಸಂಪೂರ್ಣವಾಗಿ ನಾಶವಾಗಿವೆ. ಇದರಿಂದ ಸಾಲ ತೀರಿಸಲಾಗದೆ ರೈತರು ಕಂಗಲಾಗಿದ್ದಾರೆ. ಈ ಹಿನ್ನಲೆಯಲ್ಲಿ ತಕ್ಷಣವೇ ಬೆಳೆ ಸಮೀಕ್ಷೆಯನ್ನು ಮಾಡಿಸಿ, ರೈತರಿಗೆ ಬೆಳೆ ಪರಿಹಾರವನ್ನು ಕೊಡಿಸುವಂತೆ ಒತ್ತಾಯಿಸಿದ್ದಾರೆ.



ಪರಿಹಾರ ಕೊಡಿಸುವುದ್ದಲ್ಲದೆ ಬೆಳೆ ವಿಮೆಗೆ ಒಳಪಟ್ಟವರಿಗೆ ತಕ್ಷಣ ಬೆಳೆ ವಿಮೆ ಕೊಡಿಸಬೇಕಿದೆ. ಇದ್ದಲ್ಲದೆ ಚಿತ್ರದುರ್ಗ ತಾಲ್ಲೂಕಿನಲ್ಲಿ ಹೆಚ್ಚಾಗಿ ಖುಷ್ಕಿ ಜಮೀನುಗಳಲ್ಲಿ ಸೂರ್ಯಕಾಂತಿಯನ್ನು ಬೆಳೆಯನ್ನು ಬೆಳೆದಿದ್ದಾರೆ. ಇದರ ಖರೀದಿಗೆ ಸರ್ಕಾರ ಕೇಂದ್ರಗಳನ್ನು ತೆರೆದು ಬೆಂಬಲ ಬೆಲೆಯಲ್ಲಿ ಖರೀದಿ ಮಾಡುವುದರ ಮೂಲಕ ರೈತರ ನೆರವಿಗೆ ಬರುವಂತೆ ಸರ್ಕಾರವನ್ನು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಒತ್ತಾಯಿಸಿದೆ.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಡಿ.ಎಸ್.ಹಳ್ಳಿ ಮಲ್ಲಿಕಾರ್ಜನ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆರ್.ಬಿ.ನಿಜಲಿಂಗಪ್ಪ, ಶಶಿಧರ್, ಕೃಷ್ಣಮೂರ್ತಿ, ರಂಗಸ್ವಾಮಿ, ಬಾಬುರೆಡ್ಡಿ, ಹರಳಯ್ಯ, ರಾಜಶೇಖರಪ್ಪ, ಲೋಕೇಶ್ ಪ್ರತಾಪ್ ರೆಡ್ಡಿ ಸೇರಿದಂತೆ ಇತರರು ಭಾಗವಹಿಸಿದ್ದರು.

## ಅಕ್ಷರ ದಾಸೋಹ ಎಫ್.ಡಿ.ಎ ಆಯೇಷಾ ಸಿದ್ದಿಖಾ ಅಮಾನತು

**ಚಿತ್ರದುರ್ಗ:** ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಯಮ(ಕೆ.ಟಿ.ಪಿ.ಪಿ)ಉಲ್ಲಂಘಿಸಿ, ನಿಯಮ ಬಾಹಿರವಾಗಿ ಟೆಂಡರ್ ಲಕೋಟೆ ತರೆದು, ಆರ್ಥಿಕ ಬಿಡ್ ದರ ತಿದ್ದುಪಡಿ ಮಾಡಿದ ಆರೋಪದ ಮೇಲೆ ಜಿಲ್ಲಾ ಪಂಚಾಯಿತಿ ಅಕ್ಷರ ದಾಸೋಹ ವಿಭಾಗದ ಪ್ರಥಮ ದರ್ಜೆ ಸಹಾಯಕಿ (ಎಫ್.ಡಿ.ಎ) ಆಯೇಷಾ ಸಿದ್ದಿಖಾ ಅವರನ್ನು ಅಮಾನತುಗೊಳಿಸಿ ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್ ಆದೇಶಿಸಿದ್ದಾರೆ. 2024–25ನೇ ಸಾಲಿನ ಅಕ್ಷರ ದಾಸೋಹ ಕಾರ್ಯಕ್ರಮ ಅನುಷ್ಠಾನ ಸಂಬಂಧವಾಗಿ ಇಲಾಖೆ ಉಪಯೋಗಕ್ಕೆ ಬಾಡಿಗೆ ಆಧಾರದ ಮೇಲೆ ಹೊರಮೂಲ ಸಂಸ್ಥೆಯಿಂದ ವಾಹನ ಸೇವೆ ಪಡೆಯಲು ಟೆಂಡರ್ ಕರೆಯಲಾಗಿತ್ತು. ಈ ಟೆಂಡರ್ ಪ್ರಕ್ರಿಯೆಯಲ್ಲಿ, ಕೆ.ಟಿ.ಪಿ.ಪಿ ನಿಯಮ ಉಲಂಘಿಸಿ ಎಫ್.ಡಿ.ಎ ಆಯೇಷಾ ಸಿದ್ದಿಖಾ ಟೆಂಡರ್ ಲಕೋಟೆಗಳನ್ನು ತರೆದಿರುತ್ತಾರೆ. ಆರ್ಥಿಕ ಬಿಡ್ ದರ ತಿದ್ದುಪಡಿ ಮಾಡಿ, ನಂತರ ತಿದ್ದುಪಡಿ ಮಾಡಿರುವ ಪ್ರತಿಗಳನ್ನು ಸಹ ಕಡತದಿಂದ ತೆಗೆದು ಹಾಕಿರುತ್ತಾರೆ. ಈ ಕುರಿತು ಪರಿಶೀಲಿಸಿ ಜಿ.ಪಂ.ಮುಖ್ಯ ಲೆಕ್ಕಾಧಿಕಾರಿಗಳು ವರದಿ ನೀಡಿದ್ದರು. ಇದನ್ನು ಆಧರಿಸಿ ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್ ಕೆ.ಸಿ.ಎಸ್. ನಿಯಮಾವಳಿ ಅನ್ವಯ ವಿಚಾರಣೆಗೆ ಕಾಯ್ದಿರಿಸಿ, ಆಯೇಷಾ ಸಿದ್ದಿಖಾ ಅವರನ್ನು ಅಮಾನತು ಮಾಡಿ ಆದೇಶಿಸಿದ್ದಾರೆ.

## ಬಾಲ್ಯ ವಿವಾಹ : ಪ್ರಕರಣ ದಾಖಲು

**ಚಿತ್ರದುರ್ಗ:** ಹೊಳಲ್ಕೆರೆ ತಾಲ್ಲೂಕಿನ ಟಿ.ಎಮ್ಮಿಗನೂರು ಗ್ರಾಮದಲ್ಲಿ ಅಪ್ರಾಪ್ತ ಬಾಲಕಿಯನ್ನು ಬಾಲ್ಯ ವಿವಾಹವಾಗಲು ಸಿದ್ದವಾಗಿದ್ದ ರಂಗಸ್ವಾಮಿ.ಆರ್.ಟಿ. ಎಂಬ ಯುವಕನ ವಿರುದ್ದ ಚಿತ್ರಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಾಗಿದೆ. ಬಾಲ್ಯ ವಿವಾಹ ಜರುಗುತ್ತಿರುವ ಕುರಿತ ಮಾಹಿತಿ ಆಧರಿಸಿ, ಹೊಳಲ್ಕೆರೆ ಶಿಶು ಅಭಿವೃದ್ಧಿ ಯೋಜನಾಧಿಕಾರಿ, ಯುವಕ ವಿರುದ್ದ ಬಾಲ್ಯ ವಿವಾಹ ನಿಷೇಧ ಕಾಯ್ದೆ–2006ರ ಪ್ರಕಾರ ಚಿತ್ರಹಳ್ಳಿ ಪೊಲೀಸ್ ಠಾಣೆಯಲ್ಲಿ ಶುಕ್ರವಾರ ಐಫ್.ಐ.ಆರ್ ದಾಖಲಿಸಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಕುಮಾರಿ ಕಪ್ಲೇ ತಂಗುದಾಣ ದುರಸ್ತಿಗೆ ಗ್ರಾಮಸ್ಥರ ಆಗ್ರಹ

» ಮಹದೇವಪುರ ಶಿವಮೂರ್ತಿ





ನಮ್ಮಜನ ವಿಶೇಷ

ಪರಶುರಾಂಪುರ–ಸಮೀಪದ ಕುಮರಿ ಕಪ್ಲೇ ಕ್ರಾಸ್‌ನಲ್ಲಿರುವ ಪ್ರಯಾಣಿಕರ ತಂಗುದಾಣ ಸಂಪೂರ್ಣ ಶಿಥಿಲಗೊಂಡು ಬೀಳುವ ಹಂತ ತಲುಪಿರುವುದು.

ಈ ಬಸ್ ತಂಗುದಾಣ ಚಳ್ಳಕೆರೆ ತಾಲೂಕಿನ ಗಡಿ ಹೋನ್ನಯನರೋಪ್ಪ ಹಾಗೂ ಬೇತೂರು ಪಾಳ್ಯ,ಹಿರಿಯೂರು ಗಡಿ ತಾಲೂಕಿನ ಕೊಂಡಿಯಂತಿದ್ದು, ದೋಡ್ಡಬೀರನಹಳ್ಳಿ ಗ್ರಾಮದಿಂದ ಸಮೀಪದಲ್ಲಿದೆ. ಈ ಕ್ರಾಸ್‌ನಲ್ಲಿ ಕುಮರಿ ಕಪ್ಲೇ ,ಶಿರಾದರ ಕಪ್ಲೇ,ಟಿ.ಎನ್ ಕೋಟೆ, ದೋಡ್ಡಚೆಲ್ಲೂರು,ಧರ್ಮಪುರ,ಹಿರಿಯೂರು,ಶಿರಾ, ತುಮಕೂರು, ಬೆಂಗಳೂರು ಸೇರಿದಂತೆ ವಿವಿಧ ಗ್ರಾಮಗಳ ಮಾರ್ಗವಾಗಿ ತೆರಳುವ ಬಸ್‌ಗಳು ನಿಲುಗಡೆಯಾಗುತ್ತವೆ.

ಇದೇ ಕ್ರಾಸ್‌ನ ಮೂಲಕ ಗ್ರಾಮಸ್ಥರು ತೆರಳುತ್ತಿದ್ದು, ಈ ಕ್ರಾಸ್‌ನಲ್ಲಿ ತಾಲೂಕು ಸೇರಿದಂತೆ ಇನ್ನುಳಿದ ಕೇಂದ್ರಕ್ಕೆ ತೆರಳಲು ಕಾಯುತ್ತ ನಿಲ್ಲುತ್ತಾರೆ. ಆದರೆ ಮಳೆ ಗಾಳಿ, ಬಿಸಿಲಿನಿಂದ ರಕ್ಷಿಸಿಕೊಳ್ಳಲು ಇದ್ದ ಒಂದು ತಂಗುದಾಣವೂ ಹಾಳಾಗಿದೆ. ಇದರಿಂದ ಪ್ರಯಾಣಿಕರಿಗೆ ನೆರಳಿನ ವ್ಯವಸ್ಥೆಯೂ ಇಲ್ಲ. ಹೀಗಾಗಿ ಗ್ರಾಮೀಣ ಭಾಗದ ಜನರು ನಿತ್ಯ ಸಮಸ್ಯೆ ಎದುರಿಸುತ್ತಿದ್ದಾರೆ.

ನಿರ್ವಹಣೆ ಕೊರತೆ, ಪ್ರಾಕತಿಕ ಕಾರಣಗಳಿಂದ ನಿಲ್ದಾಣದ ಚಾವಣಿ ತಗಡಿ ಶೀಟು ಉದುರಿದ್ದು, ಅಸ್ಥಿಪಂಜರದಂತಾಗಿದೆ. ಗೋಡೆಗಳು ಶಿಥಿಲ ಜತೆ ಒಂದು ಕಡೆ ಬಿದ್ದು ಹೋಗಿದೆ. ಇದರಿಂದ ಯಾವುದೇ ಸಂದರ್ಭದಲ್ಲಾದರೂ ಸಂಪೂರ್ಣ ಕುಸಿದು ಬೀಳುವ ಅಪಾಯ ಏದೆ. ಈ ರೀತಿ ಇದ್ದರೂ ಪ್ರಯಾಣಿಕರಿಗೆ ಹೊಸದಾಗಿ ತಂಗುದಾಣ ನಿರ್ಮಿಸುವ ಅಥವಾ ದುಸ್ಥಿತಿಯಲ್ಲಿರುವ ಕಟ್ಟಡ ತೆರವು ಮಡಲು ಸಂಬಂಧಪಟ್ಟವರು ಮುಂದಾಗಿಲ್ಲ. ಆದ್ದರಿಂದ ಇನ್ನಾದರೂ ಸಂಬಂಧಪಟ್ಟವರು ಕಟ್ಟಡಕ್ಕೆ ಕಾಯಕಲ್ಪ ನೀಡಬೇಕು ಎಂದು ಗ್ರಾಮಸ್ಥರಾದ ಶಂಕರಪ್ಪ, ನಾಗರಾಜ, ಕರಿಯಣ್ಣ,ಶಿವರಾಂ,ಭೂತರಾಜ,ಜಯವೀರಮ್ಮ,ಭಾಗ್ಯಮ್ಮ ಸೇರಿದಂತೆ ಇನ್ನಿತರರು ಒತ್ತಾಯಿಸಿದ್ದಾರೆ.

ಕುಮರಿ ಕಪ್ಲೇ ಕ್ರಾಸ್ ನಿಂದು ತೋರೆಬೀರನಹಳ್ಳಿಗೆ ಹೋಗುವ ರಸ್ತೆಯಲ್ಲಿ ಬರುವ ಸೇತುವೆಯು ಕುಸಿದಿದ್ದು,ವಾಹನ ಸವಾರರು, ಸ್ಥಳೀಯರು ತೋಂದರೆ ಅನುಭವಿಸುವಂತಾಗಿದೆ. ಈ ಸಂಬಂಧ ಅಖಂಡ ರಾಜ್ಯ ರೈತ ಸಂಘ ತಂಗುದಾಣ, ರಸ್ತೆ ದುರಸ್ತಿ, ಅಪೂರ್ಣ ಅಂಗನವಾಡಿ ಕಟ್ಟಡ, ಹೋನ್ನಯನರೋಪ್ಪದಲ್ಲಿ ತಂಗುದಾಣ, ಸೇತುವೆ ದುರಸ್ತಿ ಸೇರಿದಂತೆ ಇತರೆ ಹೋಕ್ಕತ್ತಾಯಗಳ ಬಗ್ಗೆ ಸಂಬಂಧಪಟ್ಟಂತಹ ಇಲಾಖೆಗೆ ಮನವಿ ಸಲ್ಲಿಸಲಾಗಿದೆ ಎಂದರು.

# ಮಕ್ಕಳ ಕಾಣೆ ಪ್ರಕರಣದ ತನಿಖೆ ಪ್ರಗತಿ ವರದಿ ಸಲ್ಲಿಸಿ: ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ವಿಜಯ್

» **ಚಿತ್ರದುರ್ಗ**

ಮಕ್ಕಳ ಕಾಣೆ ಪ್ರಕರಣಗಳನ್ನು ಪೋಲೀಸರು ಗಂಭೀರವಾಗಿ ಪರಿಗಣಿಸಬೇಕು. ತನಿಖೆ ನಡೆಯುತ್ತಿದೆ ಎಂಬ ಬಾಯಿ ಮಾತಿನ ಉತ್ತರ ನೀಡುವುದು ಬೇಕಿಲ್ಲ. ತನಿಖೆ ಪ್ರಗತಿ ಹಾಗೂ ಪೊಲೀಸರು ಕೈಗೊಂಡ ಪ್ರಯತ್ನಗಳ ಕುರಿತು ಲಿಖಿತ ರೂಪದಲ್ಲಿ ಮಾಸಿಕ ವರದಿಯನ್ನು ಸಲ್ಲಿಸುವಂತೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ವಿಜಯ್ ಸೂಚನೆ ನೀಡಿದರು.

ನಗರದ ಬಾಲ ಭವನ ಸಭಾಂಗಣದಲ್ಲಿ ಶುಕ್ರವಾರ ಕಾಣೆಯಾದ ಮಕ್ಕಳ ಪತ್ತೆ ಕುರಿತು ಪೋಷಕರು ಹಾಗೂ ತನಿಖಾ ಪೊಲೀಸ್ ಅಧಿಕಾರಿಗಳ ಸಭೆ ಜರುಗಿಸಿ ಅವರು ಮಾತನಾಡಿದರು.



ಕಾಣೆಯಾದ ಮಕ್ಕಳ ಪತ್ತೆ ಕಾರ್ಯವನ್ನು ಚುರುಕುಗೊಳಿಸಬೇಕು. ಪತ್ತೆ ಕಾರ್ಯದ ತನಿಖೆ ಪ್ರಗತಿ ಬಗ್ಗೆ ಪೋಷಕರಿಗೆ ಮಾಹಿತಿ ನೀಡಬೇಕು. ಪೊಲೀಸ್ ಇಲಾಖೆ ವತಿಯಿಂದ ಶಾಲಾ ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಈ ಮೂಲಕ ಮಕ್ಕಳಿಗೆ ಬಾಲ್ಯವಿವಾಹ, ಪೋಕ್ಸೋ, ಮಾದಕ ವಸ್ತುಗಳ ನಿಷೇಧ ಕಾಯ್ದೆ ಕುರಿತು ಮಾಹಿತಿ ನೀಡಬೇಕು. ರಾಜ್ಯ ಕಾನೂನು ಸೇವಾ ಪ್ರಾಧಿಕಾರ ಕಾಣೆಯಾದ ಮಕ್ಕಳ ಪತ್ತೆ ಕಾರ್ಯದ ವರದಿಯನ್ನು ಪಡೆದುಕೊಳ್ಳಲಿದೆ ಎಂದು ನ್ಯಾಯಾಧೀಶ ಎಂ.ವಿಜಯ್ ಹೇಳಿದರು.

2021 ರಿಂದ 2024 ವರೆಗೆ ಜಿಲ್ಲೆಯಲ್ಲಿ 345 ಮಕ್ಕಳ ಕಾಣೆ ಪ್ರಕರಣಗಳು ಐ.ಪಿ.ಸಿ ಕಲಂ 363ರ ಅಡಿಯಲ್ಲಿ ದಾಖಲಾಗಿವೆ. ಇವುಗಳ ಪೈಕಿ 337 ಪಕ್ರರಣಗಳಲ್ಲಿ ಮಕ್ಕಳನ್ನು ಪತ್ತೆ ಹಚ್ಚಲಾಗಿದೆ. ಇದೇ ಅವಧಿಯಲ್ಲಿ ಪೋಷಕರೊಂದಿಗೆ ಕಾಣೆಯದ 127 ಮಕ್ಕಳ ಪ್ರಕರಣಗಳು ದಾಖಲಾಗಿವೆ. ಇದರಲ್ಲಿ 124 ರ ಪಕ್ರಣಗಳನ್ನು ಪತ್ತೆ ಹಚ್ಚಲಾಗಿದೆ. ಎಂದು ಸಂಬಂಧ ಪಟ್ಟ ತನಿಖಾ ಪೊಲೀಸರು ನ್ಯಾಯಾಧೀಶರಿಗೆ ವರದಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಜಿ.ಸವಿತಾ, ಪೊಲೀಸ್ ವೃತ್ತ ನಿರೀಕ್ಷಕ ನಹೀಮ್ ಅಹಮದ್, ಬಸವರಾಜ್, ಗುರುಮೂರ್ತಿ ಉಪಸ್ಥಿತರಿದ್ದರು.

# ಕೋರ್ಟ್ ಆವರಣದಲ್ಲೇ ವಿಚಾರಣಾಧಿನ ಆರೋಪಿ ಹುಚ್ಚಾಟ; ಕಿಟಕಿ ಗ್ಲಾಸ್ ಹೊಡೆದು ಹಾಕಿ ಕೂಗಾಟ

» **ಚಿತ್ರದುರ್ಗ**

ನ್ಯಾಯಾಲಯದಲ್ಲೇ ವಿಚಾರಣಾಧಿನ ಆರೋಪಿಯು ಹುಚ್ಚಾಟವಾಡಿ, ಕೋರ್ಟ್‌ನ ಕಿಟಕಿ ಗ್ಲಾಸ್ ಹೊಡೆದು ಹಾಕಿ ಕೂಗಾಟ ಮಾಡಿರುವ ಘಟನೆ ಶುಕ್ರವಾರ ಸಿಜೆಎಂ ನ್ಯಾಯಾಲಯದಲ್ಲಿ ನಡೆದಿದೆ.ಸಮ್ಮು ಅಲಿಯಾಸ್ ಬಷೀರ್ ಎಂಬ ಆರೋಪಿಯೇ ನ್ಯಾಯಾಲದಲ್ಲಿ ಗಾಜು ಹೊಡೆದು ಹುಚ್ಚಾಟ ಆಡಿದ ಆರೋಪಿಯಾಗಿದ್ದಾನೆ. ಚಿತ್ರದುರ್ಗದ ನಗರ ಠಾಣೆ ವ್ಯಾಪ್ತಿಯಲ್ಲಿನ ಬ್ಯಾಂಕ್ ಕಾಲೋನಿಯಲ್ಲಿ ನಡೆದ ಮನೆ ರಾಬರಿ ಪ್ರಕರಣದಲ್ಲಿ ಆರೋಪಿಯಾಗಿರುವ ಸಮ್ಮು ಅಲಿಯಾಸ್ ಬಷೀರ್ ಕಳೆದ ಕೆಲ ವರ್ಷದ ಹಿಂದೆ ಬಂಧಿತನಾಗಿ ನ್ಯಾಯಲಯಕ್ಕೆ ವಿಚಾರಣೆಗೆ ಹಾಜರಾಗುತ್ತಿದ್ದರು,

ಇಂದು ವಿಚಾರಣೆಗೆ ನ್ಯಾಯಾಲಯಕ್ಕೆ ಹಾಜರಾದಾಗ, ನ್ಯಾಯಾಲಯದ ಹೊರಗಡೆ ಸಮ್ಮು ತನ್ನ ಸಹಚರನ ಮೊಬೈಲ್‌ನಿಂದ ಮಾತನಾಡುತ್ತಿದ್ದನು. ಪೊಲೀಸರು ಮಾತನಾಡುವುದನ್ನು ನಿಲ್ಲಿಸುವಂತೆ ಹಲವು ಭಾರೀ ಹೇಳಿದರೂ ಕೂಡ ಮಾತನಾಡುವುದನ್ನು ಮುಂದುವರೆಸಿದ್ದನು. ಆಗ ಏರು ಧನಿಯಲ್ಲಿ



ಪೊಲೀಸರು ಗದರಿದ್ದಾರೆ. ಇದರಿಂದ ಆಕ್ರೋಶಗೊಂಡ ಸಮ್ಮು ಕೈ ಕೋಳ ಹಾಕಿದ್ದ ಕೈಯಿಂದಲೇ ನ್ಯಾಯಾಲದ ಕೊಠಡಿಯ ಕಿಟಕಿ ಗಾಜಿಗೆ ಜೋರಾಗಿ ಹೊಡೆದಿದ್ದಾನೆ. ಅಲ್ಲದೆ, ಚೂರಾಗಿದ್ದ ಗಾಜನ್ನು ಹಿಡಿದು, ಅಕ್ಕದ ಪಕ್ಕದವರ ಮೇಲೆ ಹಲ್ಲೆಗೆ ಯತ್ನಿಸಿದ್ದಾನೆ. ಆಗ ಪೊಲೀಸರು ಸಮ್ಮುನನ್ನು ಹಿಡಿದು ಪೊಲೀಸ್ ವಾಹನಕ್ಕೆ ಕರೆದೊಯ್ದರು.

# ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರ ಪ್ರವಾಸ, ವಿವಿಧ ಅಂಗನವಾಡಿ ಕೇಂದ್ರಗಳಿಗೆ ಭೇಟಿ



» **ದಾವಣಗೆರೆ**

ಆಗಸ್ಟ್ 22 ರಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಡಾ| ತಿಪ್ಪೇಸ್ವಾಮಿ ಇವರು ಹರಿಹರ ತಾಲ್ಲೂಕಿನ ಮಿಟ್ಲಕಟ್ಟೆ, ಕೆ.ಬೇವಿನಹಳ್ಳಿ ಗ್ರಾಮಗಳಿಗೆ ಹಾಗೂ ಜಗಳೂರು ತಾಲ್ಲೂಕಿನ ಹಿರೇ ಅರಕೆರೆ, ಹಾಗೂ ಗುತ್ತಿದುರ್ಗ ಗ್ರಾಮಗಳಲ್ಲಿನ ಅಂಗನವಾಡಿ ಕೇಂದ್ರಗಳಿಗೆ, ಗ್ರಾಮ ಪಂಚಾಯಿತಿಗಳಿಗೆ ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಮಕ್ಕಳ ಸ್ನೇಹಿ ವಾತಾವರಣ ಹಾಗೂ ಮಕ್ಕಳ ಹಕ್ಕುಗಳ ಉಲ್ಲಂಘನೆಯಾಗುತ್ತಿರುವುದನ್ನು ತಡೆಗಟ್ಟಲು ಮಕ್ಕಳ ರಕ್ಷಣೆ ಸಹಾಯವಾಣಿ-1098ಸಂಖ್ಯೆಯನ್ನುಶಾಶ್ವತಫಲಕದಲ್ಲಿಪ್ರದರ್ಶಿಸುವುದು. ಮಕ್ಕಳ ರಕ್ಷಣಾ ನೀತಿಯನ್ನು ಅನುಷ್ಠಾನಗೊಳಿಸುವುದು, ಮಕ್ಕಳ ರಕ್ಷಣಾ ಸಮಿತಿ ಸಭೆಯನ್ನು ನಡೆಸಿ ಸಭಾ ನಡವಳಿಯನ್ನು ನಿರ್ವಹಿಸುವುದು, ಸಿಬ್ಬಂದಿಗಳಿಂದ ಮಕ್ಕಳ ರಕ್ಷಣಾ ನೀತಿಗೆ ಭದ್ರತಾ ಪತ್ರ ಪಡೆಯುವುದು ಕುರಿತು ಸವಿಸ್ತಾರವಾಗಿ ಮಾಹಿತಿ ನೀಡಿದರು. ಮಕ್ಕಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಕ್ರಮವಹಿಸಲು ಸಂಬಂಧ ಪಟ್ಟ ಅಧಿಕಾರಿಗಳಿಗೆ ಸೂಚಿಸಿದ್ದು 15 ದಿನಗಳೊಳಗಾಗಿ ಆಯೋಗಕ್ಕೆ ವರದಿ ನೀಡಲು ತಿಳಿಸಿರುತ್ತಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜನಾಯ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕವಿತಾ ಟಿ.ಎನ್, ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಹಾಸ್ಟಲ್ ಪ್ರವೇಶಾತಿ, ವಿದ್ಯಾರ್ಥಿ ವೇತನ ವಿತರಣೆಗೆ ಮನವಿ

» **ಚಿತ್ರದುರ್ಗ**

ಹಾಸ್ಟಲ್ ಪ್ರವೇಶಾತಿ,ಸಮರ್ಪಕ ವಿದ್ಯಾರ್ಥಿ ವೇತನ ವಿತರಣೆ ಮತ್ತು ಪದವಿ ಕಾಲೇಜುಗಳಿಗೆ ಉಪನ್ಯಾಸಕರ ನೇಮಕಾತಿ ಮಾಡಲು ಆಗ್ರಹಿಸಿ ಜಿಲ್ಲಾಧಿಕಾರಿಗಳು, ಮುಖಾಂತರ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯರವರನ್ನು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್‌ಒತ್ತಾಯಿಸಿದೆ.

ಈಗಾಗಲೇ ರಾಜ್ಯದಲ್ಲೆಡೆ ಪದವಿ ಪೂರ್ವ ಕಾಲೇಜುಗಳ ತರಗತಿಗಳು ಶುರುವಾಗಿ ಎರಡು ತಿಂಗಳು ಕಳೆದಿವೆ ಅದಷ್ಟೇ ಅಲ್ಲದೆ ಪದವಿ ವಿದ್ಯಾರ್ಥಿಗಳಿಗೂ ಸಹ ಈಗಾಗಲೇ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಪರೀಕ್ಷೆಗಳು ಮುಗಿದು ತರಗತಿಗಳು ಪ್ರಾರಂಭವಾಗಿವೆ. ಹೀಗಿದ್ದರೂ ಕೂಡ ಇನ್ನೂ ಸಹಿತ ಹಾಸ್ಟಲ್ ಪ್ರವೇಶಾತಿಗಳು ಪ್ರಾರಂಭ ಆಗದೇ ಇರುವುದರಿಂದ ಬಡ ಪ್ರತಿಭಾವಂತ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದಾರೆ ಅದರಿಂದ ಈ ಕೂಡಲೇ ಹಾಸ್ಟಲ್ ಪ್ರವೇಶಾತಿಯನ್ನು ಆರಂಭಿಸಬೇಕೆಂದು ಮತ್ತುಹಾಸ್ಟಲ್‌ಗಳಸಂಖ್ಯೆಯನ್ನುಹೆಚ್ಚಿಸಬೇಕೆಂದು ಆಗ್ರಹಿಸಲಾಯಿತು.



ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದಂತೆ ಸರ್ಕಾರದ ವಿದ್ಯಾರ್ಥಿವೇತನಗಳು ವಿದ್ಯಾರ್ಥಿಗಳು ನೋಂದಣಿ ಮಾಡಿದ್ದರೂ ಸಹ ವಿದ್ಯಾರ್ಥಿಗಳಿಗೆ ಕಳೆದ 3 ವರ್ಷಗಳಿಂದ ಸಮರ್ಪಕವಾಗಿ ವಿದ್ಯಾರ್ಥಿ ವೇತನ ಬರದೇ ವಿದ್ಯಾರ್ಥಿಗಳು ಪರದಾಡುತ್ತಿದ್ದಾರೆ ಆದ್ದರಿಂದ ಸಮರ್ಪಕವಾಗಿ ವಿದ್ಯಾರ್ಥಿ ವೇತನ ನೀಡಬೇಕೆಂದು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್‌ಆಗ್ರಹಿಸುತ್ತದೆ.

ಪ್ರತಿ ವರ್ಷ ಪದವಿ ವಿದ್ಯಾರ್ಥಿಗಳಿಗೆ ಸೂಕ್ತವಾಗಿ ಉಪನ್ಯಾಸಕರಿಲ್ಲದೆ ವಿದ್ಯಾರ್ಥಿಗಳು ಅವರ ತರಗತಿಗಳು ಸಂಪೂರ್ಣವಾಗದೇ ಪರೀಕ್ಷೆಗಳಿಗೆ ಹಾಜರಾಗುವ ಪರಿಸ್ಥಿತಿ ಇದೆ. ಆದ್ದರಿಂದ ಈಗಾಗಲೇ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಪದವಿ ಕಾಲೇಜುಗಳು ಈಗಾಗಲೇ ತರಗತಿಗಳುಆರಂಭವಾಗಿದ್ದು ಆದ್ದರಿಂದ ಸರ್ಕಾರ ತಡ ಮಾಡದೆ ಕೂಡಲೇ ಉಪನ್ಯಾಸಕರ ಸಂಪೂರ್ಣ ನೇಮಕಾತಿಯನ್ನು ಮಾಡಬೇಕೆಂದು ಆಗ್ರಹಿಸುತ್ತದೆ.ಈ ಬೇಡಿಕೆಗಳು ವಿದ್ಯಾರ್ಥಿಗಳಿಗ ದೃಷ್ಟಿಯಿಂದ ಬಹಳ ಮಹತ್ವಪೂರ್ಣವಾಗಿದ್ದು ಸರ್ಕಾರ ಈ ಕೂಡಲೇ ಈ ನಿಟ್ಟಿನಲ್ಲಿ ಕ್ರಮ ಕೈಗೊಂಡು ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಬೇಕೆಂದು ವಿದ್ಯಾರ್ಥಿ ಪರಿಷತ್‌ಆಗ್ರಹಿಸುತ್ತದೆ

# ಜೈವಿಕ ದ್ರವರೂಪದ ಜೈವಿಕ ಗೊಬ್ಬರ ರಿಯಾಯಿತಿ ದರದಲ್ಲಿ ಲಭ್ಯ

**ದಾವಣಗೆರೆ:** ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖಾ ವತಿಯಿಂದ ಜೈವಿಕ ಕೇಂದ್ರದಲ್ಲಿ ಉತ್ತಮ ಗುಣಮಟ್ಟದ ತಳಿಯ ಅಂಗಾಂಶ ಬಾಳೆ ಸಸಿಗಳು, ಜೈವಿಕ ನಿಯಂತ್ರಕಗಳಾದ ಟ್ರೈಕೋಡರ್ಮ, ಸೂಡೊಮೋನಾಸ್ ಹಾಗೂ ಜೈವಿಕ ಗೊಬ್ಬರಗಳಾದ ದ್ರವರೂಪದ ಜೈವಿಕ ಗೊಬ್ಬರ ಘನರೂಪದ ಜೈವಿಕ ಗೊಬ್ಬರ, ಅಜಟೋಬ್ಯಾಕ್ಟರ್, ಜೈವಿಕ ಗೊಬ್ಬರಗಳನ್ನು ತಯಾರು ಮಾಡಿ ಇಲಾಖಾ ದರದಲ್ಲಿ ಮಾರಾಟ ಮಾಡಲಾಗುತ್ತಿದೆ.

ಜೈವಿಕ ಗೊಬ್ಬರಗಳು ಮಣ್ಣಿನ ಜೈವಿಕ ಮತ್ತು ಭೌತಿಕ ಗುಣಗಳನ್ನು ಕಾಪಾಡಿ ಭೂಮಿಯ ಫಲವತ್ತತೆ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ಜೈವಿಕ ಗೊಬ್ಬರಗಳನ್ನು ಮಣ್ಣಿಗೆ ಸೇರಿಸುವುದರಿಂದ ನಿರೀಕ್ಷಿತ ಫಲಿತಾಂಶ ದೊರೆಯುತ್ತದೆ. ಆಸಕ್ತ ರೈತರು ಜೈವಿಕ ಗೊಬ್ಬರ ಖರೀದಿಸಲು ಮೊ.ಸಂ:9611556835, ಅಂಗಾಂಶ ಬಾಳೆ ಸಸಿಗಳನ್ನು ಖರೀದಿಸಲು ಮೊ.ಸಂ:8197954070 ಸಂಖ್ಯೆಗಳಿಗೆ ಸಂಪರ್ಕಿಸಬಹುದು.

## ಫಾಸ್ಟ್ ನ್ಯೂಸ್

### ಜಿಟಿಟಿಸಿ ಪ್ರವೇಶಾತಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಚಿತ್ರದುರ್ಗ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ)ದಲ್ಲಿ ಡಿಪ್ಲೋಮಾ ಕೋರ್ಸ್‌ಗಳಾದ ಡಿಪ್ಲೋಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೋಮಾ ಇನ್ ಮೆಕಾಟ್ರಾನಿಕ್ಸ್, ಡಿಪ್ಲೊಮಾ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್ ಕೋರ್ಸುಗಳಿಗೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ಮತ್ತು ಪಿಯುಸಿ ಪಾಸ್/ಫೇಲ್ ಆದ ವಿದ್ಯಾರ್ಥಿಗಳನ್ನು ನೇರ ಪ್ರವೇಶಾತಿಯ ಮೂಲಕ ಪ್ರವೇಶಾತಿ ನೀಡಲಾಗುತ್ತದೆ. ಚಿತ್ರದುರ್ಗ ಜಿಟಿಟಿಸಿ ಕೇಂದ್ರದಲ್ಲಿ ಮೊದಲು ಬಂದವರಿಗೆ ಮೊದಲ ಆದ್ಯತೆ ಮೇರೆಗೆ ಪ್ರವೇಶ ಪ್ರಕ್ರಿಯೆ ಮಾಡಲಾಗುತ್ತಿದೆ. ಡಿಪ್ಲೊಮಾ ಪ್ರವೇಶಾತಿಗೆ ಆಗಸ್ಟ್ 31ಕ್ಕೆ ಕೊನೆಯ ದಿನವಾಗಿದೆ. ಸಕ್ತರು ಚಿತ್ರದುರ್ಗ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ಸರ್ವೆ ನಂ.44, ಹಳೆಯ ಬೆಂಗಳೂರು ರಸ್ತೆ ಕಣಿವೆ ಮಾರಮ್ಮ ದೇವಸ್ಥಾನ ಹಿಂಭಾಗ ಕುಂಚಿಗನಾಳ್ ಚಿತ್ರದುರ್ಗ, ಮೊಬೈಲ್ ಸಂಖ್ಯೆ 9738465834, 9481866855, 9945616114 ಗೆ ಸಂಪರ್ಕಿಸಬಹುದು ಎಂದು ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಉಪ್ಪಾರ ನಿಗಮದಿಂದ ಸಾಲ ಸೌಲಭ್ಯಕ್ಕಾಗಿ ಅರ್ಜಿ

» **ಚಿತ್ರದುರ್ಗ**

ಹಿಂದುಳಿದ ವರ್ಗಗಳಿಗೆ ಸೇರಿದ ಉಪ್ಪಾರ ಮತ್ತು ಇದರ ಉಪಜಾತಿಯವರ ಆರ್ಥಿಕ ಅಭಿವೃದ್ಧಿಗಾಗಿ ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ 2024-25ನೇ ಸಾಲಿಗೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು, ಸೇವಾಸಿಂಧು ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸೆಪ್ಟೆಂಬರ್ 16 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಉಪ್ಪಾರ ಅಭಿವೃದ್ಧಿ ನಿಗಮದಡಿಯಲ್ಲಿ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ), ಅರಿವು ಶೈಕ್ಷಣಿಕ ಸಾಲ ಯೋಜನೆ (ನೂತನ), ಅರಿವು ಶೈಕ್ಷಣಿಕ ಸಾಲ ಯೋಜನೆ (ನವೀಕರಣ), ವಿದೇಶಿ ವ್ಯಾಸಂಗ ಯೋಜನೆ ಈ ಯೋಜನೆಯಡಿ ವಾರ್ಷಿಕ ವರಮಾನವು ರೂ.8 ಲಕ್ಷಗಳ ಮಿತಿಯಲ್ಲಿರಬೇಕು, ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಗಂಗಾಕಲ್ಯಾಣ ನೀರಾವರಿ ಯೋಜನೆ ಈ ಯೋಜನೆಯಲ್ಲಿ ಎಕರೆ ಜಮೀನು ಕನಿಷ್ಠ 2 ಎಕರೆ ಹೊಂದಿರಬೇಕು, ಸ್ವಾವಲಂಬಿ ಸಾರಥಿ ಯೋಜನೆಗೆ ಅರ್ಜಿ ಸಲ್ಲಿಸಬಹುದಾಗಿದೆ.

**ಅರ್ಜಿ ಸಲ್ಲಿಸಲು ಇರಬೇಕಾದ ಅರ್ಹತೆಗಳು:** ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವವರು ಸರ್ಕಾರದ ಆದೇಶದನ್ವಯ ಉಪ್ಪಾರ ಸಮುದಾಯ ಹಾಗೂ ಅದರ ಉಪಜಾತಿಗೆ ಸೇರಿರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಚಾಲ್ತಿಯಲ್ಲಿರಬೇಕು. 18-55 ವರ್ಷಗಳ ವಯೋಮಿತಿ ಹೊಂದಿರಬೇಕು. ನಿಗಮ/ಸರ್ಕಾರದ ಯಾವುದಾದರೂ ಯೋಜನೆಗಳಡಿಯಲ್ಲಿ ಈ ಹಿಂದೆ ಸೌಲಭ್ಯ ಪಡೆದಿರಬಾರದು. ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು. ಅರಿವು ಯೋಜನೆಯಡಿ 18-30 ವರ್ಷ ವಯೋಮಿತಿಯೊಂದಿಗೆ, ವಾರ್ಷಿಕ ವರಮಾನ 3.50 ಲಕ್ಷ ಹೊಂದಿರಬೇಕು. ಸ್ವಾವಲಂಬಿ ಸಾರಥಿ ಯೋಜನೆಯಡಿ ಅರ್ಜಿದಾರನು 21 ರಿಂದ 45 ವರ್ಷ ವಯೋಮಿತಿ ಹೊಂದಿರಬೇಕು. ಅರ್ಜಿದಾರನ ತಮ್ಮ ಮೊಬೈಲ್ ಸಂಖ್ಯೆಯನ್ನು ಹಾಗೂ ಬ್ಯಾಂಕ್ ಖಾತೆಯನ್ನು ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ಆದಾಯ ಗ್ರಾಮಾಂತರ ಪ್ರದೇಶದಲ್ಲಿ ರೂ.98,000/ ಮತ್ತು ನಗರ ಪ್ರದೇಶದವರಿಗೆ ರೂ.1,20,000/ ಮೀರಿರಬಾರದು. ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33, ವಿಕಲಚೇತನರಿಗೆ ಶೇ.5, ಹಾಗೂ ತೃತೀಯ ಲಿಂಗಿಗಳಿಗೆ ಶೇ.1 ರಷ್ಟು ಮೀಸಲಾತಿ ಇರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ಸೈಟ್ www.upparadevolopment.karnataka.gov.in ಅಥವಾ ನಿಗಮದ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ 080-22252555 ಗೆ ಅಥವಾ ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ನಿಗಮದ ಜಿಲ್ಲಾ ವ್ಯವಸ್ಥಾಪಕರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಆ.24 ರಿಂದ 27 ರವರೆಗೆ ವಿದ್ಯುತ್ ವ್ಯತ್ಯಯ

» **ಚಿತ್ರದುರ್ಗ**

ಚಿತ್ರದುರ್ಗ ಗ್ರಾಮೀಣ ಉಪ ವಿಭಾಗ ಬೆಸ್ಕಾಂ ವ್ಯಾಪ್ತಿಯಲ್ಲಿ ಬರುವ ಹಿರೆಗುಂಟನೂರು ಶಾಖಾ ವ್ಯಾಪ್ತಿಯಲ್ಲಿ ಬರುವ ಹಿರೇಗುಂಟನೂರು ಗ್ರಾಮದಿಂದ ಗುತ್ತಿನಾಡು ಗ್ರಾಮದವರೆಗೆ 11ಕೆವಿ ಲಿಂಕ್ ಲೈನ್ ಮಾರ್ಗ ರಚಿಸುವ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಇದೇ ಆಗಸ್ಟ್ 24 ರಿಂದ 27 ರವರೆಗೆ ಬೆಳಿಗ್ಗ 11 ಗಂಟೆಯಿಂದ ಸಂಜೆ 5 ಗಂಟೆಯರೆಗೆ ಹಿರೇಗುಂಟನೂರು ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜಾಗುವ 11ಕೆ.ವಿ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಅಡಚಣೆಯಾಗುವ ಮಾರ್ಗಗಳು: 66/11 ಕೆವಿ ಹಿರೆಗುಂಟನೂರು ವಿವಿ ಕೇಂದ್ರದಿಂದ ಸರಬರಾಜಾಗುವ 11 ಕೆವಿ ಮಾರ್ಗದ ಎಫ್-9 ಸೀಬಾರ ಮತ್ತು ಎಫ್-10 ಬೀರಾವರ ಎನ್.ಜೆ.ವೈ 11 ಕೆ.ವಿ ಮಾರ್ಗಗಳಲ್ಲಿ ಅಡಚಣೆಯಾಗುತ್ತದೆ.

**ಪ್ರಮುಖ ಸುದ್ದಿ**

# ಸೊಳ್ಳೆಗಳ ನಿಯಂತ್ರಣಕ್ಕೆ ಸಾರ್ವಜನಿಕರ ಸಹಕಾರ ಅಗತ್ಯ

» **ಚಿತ್ರದುರ್ಗ**

ಕೀಟನಾಶಕ ಸಿಂಪಡಣೆ ಮಾಡುವ ಮೂಲಕ ಸೊಳ್ಳೆಗಳನ್ನು ನಿಯಂತ್ರಣ ಮಾಡಬಹುದು. ಈ ಕಾರ್ಯಕ್ಕೆ ಸಾರ್ವಜನಿಕರ ಸಹಕಾರ ಅಗತ್ಯವಿದೆ ಎಂದು ಎನ್.ವಿ.ಬಿ.ಡಿ.ಸಿ.ಪಿ ಅಧಿಕಾರಿ ಡಾ.ಕಾಶಿ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಬೆಳಗಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಕೀಟಜನ್ಯ ರೋಗಗಳ ಸಮಸ್ಯಾತ್ಮಕ ಪ್ರದೇಶ ಎಂದು ಗುರುತಿಸಿರುವ ಹೋಚಿ ಬೋರಯ್ಯ ಬಡವಾಣೆಯಲ್ಲಿ ಶುಕ್ರವಾರ ಆರೋಗ್ಯ ಇಲಾಖೆ ಹಾಗೂ ಬೆಳಗಟ್ಟ ಗ್ರಾಮ ಪಂಚಾಯತಿ ಸಹಯೋಗದೊಂದಿಗೆ ಸೊಳ್ಳೆಗಳ ತಾಣ ನಾಶಕ್ಕಾಗಿ ಕೀಟನಾಶಕ ಸಿಂಪಡಣೆ ಕಾರ್ಯ ನೆರವೇರಿಸಿ ಅವರು ಮಾತನಾಡಿದರು.

ಸರ್ಕಾರದ ಮಾರ್ಗಸೂಚಿಯಂತೆ ಗ್ರಾಮದಲ್ಲಿ ಕೀಟನಾಶಕ ಸಿಂಪಡಣೆ ಕಾರ್ಯ ನಡೆಯುತ್ತಿದೆ. ಈ ಕುರಿತು ಸಾರ್ವಜನಿಕರಿಗೆ ಟಾಂ ಟಾಂ ಮಾಡುವ ಮೂಲಕ ಮಾಹಿತಿ ನೀಡಲಾಗಿದೆ.





ಇಂದು ಕೀಟನಾಶಕ ಸಿಂಪಡಿಸಲು ತಂಡ ರಚಿಸಿ 3 ಸಿಂಪಡಣೆ ಪಂಪು ಮೂಲಕ 60 ಮನೆಗಳ ಒಳಗೆ ಹಾಗೂ ಹೊರಗೆ ಕೀಟನಾಶಕ ಸಿಂಪಡಣೆ ಮಾಡಲಾಗಿದೆ. ನಾಳೆಯು ಕೀಟನಾಶಕ ಸಿಂಪಡಣೆ ಕಾರ್ಯ ಮುಂದುವರೆಯಲ್ಲಿದ್ದು, ಉಳಿದ 60 ಮನೆಗಳಿಗೆ ಸಿಂಪಡಣೆ ಮಾಡಲಾಗುವುದು ಎಂದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ ಕೀಟನಾಶಕ ಸಿಂಪಡಣೆಗೆ ನಿರಾಕರಿಸಿದವರಿಸಿದ ಗ್ರಾಮಸ್ಥರಿಗೆ ಸೊಳ್ಳೆಗಳ ಕಚ್ಚುವಿಕೆಯಿಂದ ಮಲೇರಿಯ, ಡೆಂಗ್ಯೂ, ಜೀಕಾ, ಚಿಕನ್ ಗುನಿಯಾ ಬರುತ್ತವೆ. ರೋಗವಾಹಕ ಸೊಳ್ಳೆಗಳ ತಾಣ ನಾಶ ಮಾಡುವುದರಿಂದ ಇಂತಹ ಕಾಯಿಲೆ ಹರಡುವುದನ್ನು ತಪ್ಪಿಸಬಹುದು ಎಂದು ಜನರ ಮನ ಒಲಿಸಿದರು. ಜಿಲ್ಲಾ ಕೀಟಶಾಸ್ತ್ರಜ್ಞೆ ನಂದಿನಿಕಡಿ ಸಿಂಪಡಣೆ ಮಾಡುವ ನೌಕರರಿಗೆ ಯಾವ ಪ್ರಮಾಣದಲ್ಲಿ ರಸಾಯನಿಕ ಎಷ್ಟು ಲೀಟರ್ ನೀರಿಗೆ ದ್ರಾವಣ ಮಾಡಿಕೊಳ್ಳ ಬೇಕು, ಸಿಂಪಡಣೆ ಮಾಡುವ ವಿಧಾನವನ್ನು ತೋರಿಸಿಕೊಟ್ಟರು. ಕಾರ್ಯಕ್ರಮದಲ್ಲಿ ಗ್ರಾ.ಪಂ. ಉಪಾಧ್ಯಕ್ಷ ಮಲ್ಲಿಕಾರ್ಜುನ್, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ರುದ್ರಮುನಿ ಮಲ್ಲಿಕಾರ್ಜುನ, ಮಹೇಶ್, ನಾಗೇಶ್ ಆಶಾ ಕಾರ್ಯಕರ್ತೆಯರಾದ ಕವಿತಾ ಹೇಮಲತಾ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಲೋಕಾಯುಕ್ತ ಅಹವಾಲು ಸ್ವೀಕಾರ

» **ಚಿತ್ರದುರ್ಗ**

ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ವಿಭಾಗದ ಅಧಿಕಾರಿಗಳು ಇದೇ ಆಗಸ್ಟ್ 27 ಮತ್ತು 28 ರಂದು ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ತಾಲ್ಲೂಕುಗಳಿಗೆ ಖುದ್ದಾಗಿ ಭೇಟಿ ನೀಡಿ ಸಾರ್ವಜನಿಕರಿಂದ ದೂರು ಹಾಗೂ ಅವಹಾಲು ಸ್ವೀಕರಿಸುವರು. ಇದೇ ಆಗಸ್ಟ್ 27ರಂದು ಮಂಗಳವಾರ ಬೆಳಿಗ್ಗ 10.30 ರಿಂದ 1.30 ರವರೆಗೆ ಮೊಳಕಾಲ್ಮೂರು ಪಟ್ಟಣ ಪಂಚಾಯಿತಿ ಹಾಗೂ ಹೊಸದುರ್ಗ ಪುರಸಭೆ ಹಾಗೂ ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಚಳ್ಳಕೆರೆ ನಗರಸಭೆ ಹಾಗೂ ಹೊಳಲ್ಕೆರೆ ಪುರಸಭೆಯಲ್ಲಿ ಅಹವಾಲು ಸ್ವೀಕರಿಸುವರು. ಆಗಸ್ಟ್ 28ರಂದು ಬುಧವಾರ ಬೆಳಿಗ್ಗ 10.30 ರಿಂದ 1.30 ರವರೆಗೆ ಹಿರಿಯೂರು ನಗರಸಭೆ ಕಚೇರಿಯಲ್ಲಿ ಹಾಗೂ ಮಧ್ಯಾಹ್ನ 2.30 ರಿಂದ ಸಂಜೆ 5.30ರವರೆಗೆ ಚಿತ್ರದುರ್ಗ ನಗರಸಭೆ ಕಚೇರಿಯಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ.ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಮಾಡಿಕೊಡಲು ಅಲ್ಲಿನ ಅಧಿಕಾರಿ, ಸಿಬ್ಬಂದಿ ಲಂಚಕ್ಕಾಗಿ ಬೇಡಿಕೆ, ಯೋಜನೆಗಳ ಅನುಷ್ಠಾನದಲ್ಲಿ ಅನಾವಶ್ಯಕ ವಿಳಂಬ, ಕರ್ತವ್ಯದಲ್ಲಿ ನಿರ್ಲಕ್ಷತನ, ತಾರತಮ್ಯ, ಅರ್ಹ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳ ಲಾಭ ಸರಿಯಾದ ರೀತಿಯಲ್ಲಿ ತಲುಪಿಸದೇ ಇರುವ ಕುರಿತು ಸಾರ್ವಜನಿಕರು ನಿಗದಿತ ಅರ್ಜಿ ನಮೂನೆಯಲ್ಲಿ ದೂರು ಸಲ್ಲಿಸಬಹುದು ಎಂದು ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ಪೊಲೀಸ್ ಅಧೀಕ್ಷಕ ಎನ್.ವಾಸುದೇವರಾಮ ತಿಳಿಸಿದ್ದಾರೆ.

### ಶ್ರೀಕೃಷ್ಣ ಜಯಂತಿ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಇದೇ ಆಗಸ್ಟ್ 26ರಂದು ಮಧ್ಯಾಹ್ನ 12ಕ್ಕೆ ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ಶ್ರೀ ಕೃಷ್ಣ ವೃತ್ತದಲ್ಲಿ ಕೃಷ್ಣ ಜಯಂತಿ ಆಚರಣೆ ಸಮಾರಂಭ ಆಯೋಜಿಸಲಾಗಿದೆ. ಚಿತ್ರದುರ್ಗದ ಅಖಿಲ ಭಾರತ ಯಾದವ ಗುರುಪೀಠದ ಕೃಷ್ಣ ಯಾದವನಂದ ಸ್ವಾಮೀಜಿ ದಿವ್ಯಸಾನಿಧ್ಯ ವಹಿಸುವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು.ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ ಕಾರಜೋಳ, ಹೊಸದುರ್ಗ ಶಾಸಕರು ಹಾಗೂ ಅಹಾರ ಮತ್ತು ನಾಗರೀಕ ಸರಬರಾಜು ಅಭಿವೃದ್ಧಿ ನಿಗಮದ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ. ರಘುಮೂರ್ತಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಅನ್ವರ್ ಭಾಷಾ, ಮೊಳಕಾಲ್ಮುರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ಅಧ್ಯಕ್ಷ ಜಿ.ಎಸ್.ಮಂಜುನಾಥ, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗ ಅಧ್ಯಕ್ಷ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ತಾಜ್‍ಪೀರ್, ಜಿಲ್ಲಾ ಯಾದವ ಸಂಘ ಅಧ್ಯಕ್ಷ ಸಿ.ಮಹಾಲಿಂಗಪ್ಪ, ಕಾರ್ಯದರ್ಶಿ ಬಿ.ಆನಂದ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ಯಾದವ ಸಮಾಜದ ಮುಖಮಡರು ಹಾಗೂ ಗಣ್ಯರು ಭಾಗವಹಿಸುವರು. ನಿವೃತ್ತ ಪ್ರಾಧ್ಯಾಪಕ ಪ್ರೊ.ಜಿ.ಪರಮೇಶ್ವರಪ್ಪ ಉಪನ್ಯಾಸ ನೀಡುವರು. ಚಿತ್ರದುರ್ಗ ತಾಲ್ಲೂಕು ಆಯಿತೋಳು ಮಾರುತೇಶ್ ಮತ್ತು ತಂಡದವರಿಂದ ಗೀತ ಗಾಯನ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್ ತಿಳಿಸಿದ್ದಾರೆ.

### ಅಂಗನವಾಡಿ ಹುದ್ದೆ ತಾತ್ಕಾಲಿಕ ಪಟ್ಟಿ ಪ್ರಕಟ

» **ಚಿತ್ರದುರ್ಗ**

ಹೊಳಲ್ಕೆರೆ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿಯಿರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿದೆ. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಹಾಗೂ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯಿತಿ, ಶಾಲೆ ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ಸಾರ್ವಜನಿಕರ ಗಮನಕ್ಕಾಗಿ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ. ಆಯ್ಕೆ ಪಟ್ಟಿ ಸಂಬಂಧ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಆಗಸ್ಟ್ 31ರ ಸಂಜೆ 5.30 ರೊಳಗಾಗಿ ಸಲ್ಲಿಸುವಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿ ತಿಳಿಸಿದ್ದಾರೆ.

### ಯಾತ್ರಿ ನಿವಾಸ ಹಸ್ತಾಂತರ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕಿನ ವಾಣಿವಿಲಾಸ ಸಾಗರ ಮಾರಿಕಾಂಬ ದೇವಸ್ಥಾನದ ಮುಂಭಾಗದಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ರೂ.5 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಯಾತ್ರಿನಿವಾಸ, ಉದ್ಯಾನವನಗಳ ಜೊತೆಗೆ ಶೌಚಾಲಯಗಳನ್ನು ಕಟ್ಟಡಗಳನ್ನು ಖಾಸಗಿ ಸಂಸ್ಥೆಗಳು ಹಸ್ತಾಂತರಿಸಿಕೊಳ್ಳಲು ಇಚ್ಚಿಸಿದ್ದಲ್ಲಿ,ಪ್ರವಾಸೋದ್ಯಮ ಇಲಾಖೆಗೆ "ಆಸಕಿಯ ಅಭಿವ್ಯಕ್ತ" ಎಕ್ಸ್‌ಪೆನ್ಸ್ ಆಫ್ ಇಂಟ್ರೆಸ್ಟ್ (EOI) ಸಲ್ಲಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲೆಯ ಕಾಮನಬಾವಿ ಬಡಾವಣೆಯಲ್ಲಿನ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಸಂಪರ್ಕಿಸಿ.

---

### ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ಕರ ವಸೂಲಿಗೆ ವಿಶೇಷ ಅಂದೋಲನ

# ಸೆ.5 ರವರೆಗೆ ತೆರಿಗೆ ವಸೂಲಾತಿ ಅಭಿಯಾನ









» **ಚಿತ್ರದುರ್ಗ**

ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಇದೇ ಆಗಸ್ಟ್ 22 ರಿಂದ "ತೆರಿಗೆ ವಸೂಲಾತಿ ಅಭಿಯಾನ" ಈಗಾಗಲೆ ಪ್ರಾರಂಭಗೊಂಡಿದ್ದು, ಸೆಪ್ಟೆಂಬರ್ 5 ರವರೆಗೆ ಕರ ವಸೂಲಾತಿಗಾಗಿ ವಿಶೇಷ ಆಂದೋಲನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ತಿಳಿಸಿದ್ದಾರೆ.

ಗ್ರಾಮ ಪಂಚಾಯಿತಿಗಳು ವಿಕೇಂದ್ರಿಕರಣ ವ್ಯವಸ್ಥೆಯಲ್ಲಿ ಸಶಕ್ತ ಕೇಂದ್ರಗಳಾಗಿ ಕಾರ್ಯನಿರ್ವಹಿಸಲು ಆರ್ಥಿಕವಾಗಿ ಸಬಲೀಕರಣ ಹೊಂದುವ ಅವಶ್ಯಕತೆ ಇರುತ್ತದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 200 (7) ರಲ್ಲಿ ನಿರ್ಧಿಷ್ಟ ಪಡಿಸಿರುವಂತೆ ಗ್ರಾಮ ಪಂಚಾಯಿತಿಗೆ ಸಲ್ಲಿಕೆ ಆಗಬೇಕಾಗಿರುವ ತೆರಿಗೆಯಲ್ಲಿ ಶೇ.100ರಷ್ಟು ವಸೂಲಿ ಮಾಡುವುದು ಗ್ರಾಮ ಪಂಚಾತಿಯ ಪ್ರಾಥಮಿಕ ಹೊಣೆಗಾರಿಕೆಯಾಗಿರುತ್ತದೆ. ಈ ದಿಸೆಯಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಪರಿಣಾಮಕಾರಿಯಾಗಿ ಕ್ರೂಢೀಕರಿಸಿ ಕೊಳ್ಳಲು ಕರವಸೂಲಾತಿ ಅಭಿಯಾನದ ಪ್ರಕ್ರಿಯೆಯನ್ನು ಒಂದು ವಿಶೇಷ ಅಂದೋಲನವನ್ನಾಗಿ ನಡೆಸಬೇಕಾಗಿರುತ್ತದೆ. ಆದ್ದರಿಂದ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಒಳಗೊಂಡಂತೆ ಗ್ರಾಮ ಪಂಚಾಯಿತಿಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ನೇತೃತ್ವದಲ್ಲಿ ತಂಡವನ್ನು ರಚಿಸಿ, ಆ.22 ರಿಂದ ಸೆ.5 ರವರೆಗೆ ಕಡ್ಡಾಯವಾಗಿ ತೆರಿಗೆ ವಸೂಲಾತಿ ಅಭಿಯಾನ ಹಮ್ಮಿಕೊಳ್ಳಬೇಕು ಜಿಲ್ಲೆಯ ಆಯಾ ತಾಲ್ಲೂಕಿನ ತಾ.ಪಂ. ಕಾರ್ಯ ನಿರ್ವಾಹಕ ಅಧಿಕಾರಿಗಳು, ಎಲ್ಲಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಕುಂಠಿತವಾಗಿರುವ ಕಂದಾಯ ವಸೂಲಾತಿ ಪ್ರಗತಿಯನ್ನು ಹೆಚ್ಚಿಸುವ ಹಿನ್ನಲೆಯಲ್ಲಿ, ಕೂಡಲೇ ತೆರಿಗೆ ವಸೂಲಾತಿ ಅಭಿಯಾನ ಹಮ್ಮಿಕೊಂಡು ಪ್ರಗತಿ ಸಾಧಿಸುವಂತೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿ, ಕಂದಾಯ ವಸೂಲಾತಿಯಲ್ಲಿ ಪ್ರಗತಿ ಸಾಧಿಸಬೇಕು. ತಪ್ಪಿದ್ದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿಸಲಾಗುವುದು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ತಿಳಿಸಿದ್ದಾರೆ.

ಜಿ.ಪಂ. ಸಿಇಒ ಅವರ ನಿರ್ದೇಶನದಂತೆ ಗ್ರಾಮ ಪಂಚಾಯತಿಗಳನ್ನು ಸಶಕ್ತಗೊಳಿಸುವ ಉದ್ದೇಶದಿಂದ ಜಿಲ್ಲೆಯ ಎಲ್ಲ ತಾಲ್ಲೂಕುಗಳ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಈಗಾಗಲೆ ಕರ ವಸೂಲಾತಿ ಆಂದೋಲನ ಪ್ರಾರಂಭವಾಗಿದ್ದು, ತಾ.ಪಂ. ಕಾರ್ಯ ನಿರ್ವಾಹಕ ಅಧಿಕಾರಿಗಳು, ಪಿಡಿಒ ಗಳು, ಕಾರ್ಯದರ್ಶಿಗಳು, ನೀರಗಂಟಿಗಳು ತಮ್ಮ ತಮ್ಮ ಗ್ರಾಮಗಳ ವ್ಯಾಪ್ತಿಯಲ್ಲಿ ಕರ ವಸೂಲಾತಿಯನ್ನು ಆರಂಭಿಸಿದ್ದು, ಮನೆಗಳು, ಅಂಗಡಿ ಮುಂಗಟ್ಟು, ಮಳಿಗೆಗಳಿಗೆ ತೆರಳಿ ಕರ ವಸೂಲಾತಿ ಕೈಗೊಳ್ಳುತ್ತಿದ್ದಾರೆ. ಅಧಿಕಾರಿಗಳು ನಿಗದಿತ ಗುರಿಯನ್ನು ಸಾಧಿಸಿ, ಅಭಿವೃದ್ಧಿಯ ಉದ್ದೇಶದಿಂದ ಗ್ರಾಮ ಪಂಚಾಯತಿಗಳನ್ನು ಆರ್ಥಿಕವಾಗಿ ಸಬಲಗೊಳಿಸಲು ಮುಂದಾಗಬೇಕು ಎಂದು ಜಿ.ಪಂ. ಸಿಇಒ ತಿಳಿಸಿದ್ದಾರೆ.

---

## ಗುತ್ತಿನಾಡು ಕಾಲೇಜಿನಲ್ಲಿ ಜಾಗೃತಿ ಕಾರ್ಯಕ್ರಮ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕು ಸಿಬಾರ ಹತ್ತಿರದ ಗುತ್ತಿನಾಡಿನ ವಿಶ್ವಮಾನವ ವಸತಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜಿನಲ್ಲಿ ಶುಕ್ರವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಸಹಯೋಗದಲ್ಲಿ ಬಾಲ್ಯವಿವಾಹ ಅರಿವು ಜಾಗೃತಿ ಕಾರ್ಯಕ್ರಮ ನಡೆಸಲಾಯಿತು.

ಲಿಂಗ ವಿಶೇಷಜ್ಞೆ ಗೀತಾ.ಡಿ ಬಾಲ್ಯವಿವಾಹ ನಿಷೇಧ, ಬಾಲ ಕಾರ್ಮಿಕ ನಿಷೇಧ, ಪೋಕ್ಸೋ ಹಾಗೂ ಬಾಲ ತಾಯಂದಿರು, ಮಕ್ಕಳ ಹಕ್ಕುಗಳು, ಮಕ್ಕಳ ಅಪಹರಣ, ಸುರಕ್ಷಿತ ಸ್ಪರ್ಶ ಹಾಗೂ ಅಸುರಕ್ಷಿತ ಸ್ಪರ್ಶಗಳ ಕುರಿತು ಚಟುವಟಿಕೆಗಳ ಮೂಲಕ ಮಕ್ಕಳಲ್ಲಿ ಅರಿವು ಮೂಡಿಸಿದರು.

ಭರಮಸಾಗರ ಶಿಶು ಅಭಿವೃದ್ಧಿ ಯೋಜನೆ ಮೇಲ್ವಿಚಾರಕಿ ಪುಷ್ಪಾ ಮಾತನಾಡಿ, ಸ್ಥಳೀಯ ಬಾಲ್ಯವಿವಾಹ ಪ್ರಕರಣಗಳನ್ನು ಉಲ್ಲೇಖಿಸಿ, ಬಾಲ್ಯ ವಿವಾಹ ಎಂಬುದೊಂದು ಸಾಮಾಜಿಕ ಪಿಡುಗಾಗಿದೆ, ಅದರಿಂದ ಆಗುವ ಅನಾನುಕೂಲತೆಗಳ ಬಗ್ಗೆ ಹಾಗೂ ಬಾಲ್ಯವಿವಾಹ ತಡೆಗಟ್ಟುವಲ್ಲಿ ಮಕ್ಕಳು, ಪೋಷಕರು ಹಾಗೂ ಶಿಕ್ಷಕರ ಜವಾಬ್ದಾರಿಗಳನ್ನು ಕುರಿತು ಮನದಟ್ಟು ಮಾಡಿದರು.

ಕಾರ್ಯಕ್ರಮದಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಅನ್ನು ಪ್ರಚುರ ಪಡಿಸಲಾಯಿತು.

ವಿಶ್ವ ಮಾನವ ಶಿಕ್ಷಣ ಸಂಸ್ಥೆ ನೀಲಕಂಠ ದೇವರು, ಸಂಸ್ಥೆಯ ರೂವಾರಿ ಜಲೀಲ್ ಸಾಬ್, ಪಿಯು ಕಾಲೇಜು ಪ್ರಾಂಶುಪಾಲರಾದ ಸುಧಾ ಪ್ರೌಢಶಾಲೆ ಮುಖ್ಯೋಪಾಧ್ಯಾಯರು, ಜಿಲ್ಲಾ ಸಂಯೋಜಕ ಚೇತನ್ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು ಉಪಸ್ಥಿತರಿದ್ದರು.



## ಪಿಓಪಿ ಗಣೇಶನ ವಿಗ್ರಹಗಳ ತಯಾರಿಕೆ, ಮಾರಾಟ ನಿಷಿದ್ಧ

» **ದಾವಣಗೆರೆ**

ಸೆಪ್ಟೆಂಬರ್ 7 ರಂದು ಸಡಗರ ಹಾಗೂ ಸಾಂಪ್ರದಾಯಿಕವಾಗಿ ಗೌರಿ, ಗಣೇಶ ಹಬ್ಬವನ್ನು ಆಚರಣೆ ಮಾಡಲಾಗುತ್ತಿದೆ. ಈ ವೇಳೆ ಪ್ಲಾಸ್ಟರ್ ಆಫ್ ಪ್ಯಾರೀಸ್‌ನಿಂದ ತಯಾರಿಸಿದ ಗಣೇಶನ ವಿಗ್ರಹ ತಯಾರಿಸುವುದು ಮತ್ತು ಮಾರಾಟ ಮಾಡುವುದು ರಾಜ್ಯಾದ್ಯಂತ ನಿಷಿದ್ದವಾಗಿದ್ದು ಪರಿಸರ ಸ್ನೇಹಿ ಮಣ್ಣು ಹಾಗೂ ನೈಸರ್ಗಿಕ ಬಣ್ಣ ಲೇಪಿತ ವಿಗ್ರಹಗಳನ್ನು ಪ್ರತಿಷ್ಠಾಪನೆ ಮಾಡುವ ಮೂಲಕ ಗಣೇಶ ಮೂರ್ತಿಗಳನ್ನು ನಿಗದಿತ ಸ್ಥಳದಲ್ಲಿಯೇ ವಿಸರ್ಜನೆ ಮಾಡಬೇಕೆಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಸಾರ್ವಜನಿಕರು ಮಣ್ಣಿನಿಂದ ತಯಾರಿಸಿದ ಹಾಗೂ ನೈಸರ್ಗಿಕ ಬಣ್ಣ ಲೇಪಿತ ಮಣ್ಣಿನ ಗಣೇಶ ಮೂರ್ತಿಗಳೊಂದಿಗೆ ಸರಳ ರೀತಿಯಲ್ಲಿ ಭಕ್ತಿ ಪೂರ್ವಕವಾಗಿ ದೇವಸ್ಥಾನದೊಳಗೆ, ತಮ್ಮ ಮನೆಗಳಲ್ಲಿಯೇ ಪ್ರತಿಷ್ಠಾಪನೆ ಮಾಡಿ ಸಂಭ್ರಮದಿಂದ ಹಬ್ಬ ಆಚರಿಸಿ, ಈ ದಿನಗಳಲ್ಲಿ ಧ್ವನಿವರ್ಧಕ, ಡೋಲು, ತಮ್ಮಟೆ, ಜಾಗಟೆ, ಹಸಿರು ಪಟಾಕಿಯನ್ನು ರಾತ್ರಿ 10 ರಿಂದ ಬೆಳಗ್ಗೆ 6 ಗಂಟೆಯ ಅವಧಿಯಲ್ಲಿ ಬಳಸಬಾರದು. ಮತ್ತು ರಸ್ತೆ ಮತ್ತು ಚರಂಡಿಗಳಲ್ಲಿ ಹೂವಿನ ಹಾರ, ತಟ್ಟೆ, ಲೋಟ, ಎಲೆಗಳನ್ನು ಎಸೆಯಬೇಡಿ, ಮನೆಯ ಹತ್ತಿರ ಬರುವ ಸ್ಥಳೀಯ ಸಂಸ್ಥೆಗಳ ಕಸದ ವಾಹನಗಳಿಗೆ ನೀಡಬೇಕು. ಹಾಗೂ ಮೂರ್ತಿಗಳ ವಿಸರ್ಜನೆ ಸಂದರ್ಭದಲ್ಲಿ ಹಸಿ ಕಸ ಇದರಲ್ಲಿ ಹೂವು, ಹಣ್ಣು, ಬಾಳೆಕಂಬ, ಮಾವಿನ ತೋರಣ ಇತ್ಯಾದಿ ಪ್ರತ್ಯೇಕಿಸಿ ಮೂರ್ತಿಗಳೊಂದಿಗೆ ಇದಕ್ಕಾಗಿ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನಿಗಧಿಪಡಿಸಿದ ಸಂಚಾರಿ ತೊಟ್ಟಿಗಳಲ್ಲಿಯೇ ವಿಸರ್ಜನೆ ಮಾಡಬೇಕೆಂದು ತಿಳಿಸಿದ್ದಾರೆ.

---

## ಕೃಷಿ ಚಟುವಟಿಕೆಗೆ ಬೂಸ್ಟ್ ನೀಡಿದ ಮಳೆರಾಯ

» **ಚಳ್ಳಕೆರೆ**

ಕಳೆದ ಜೂನ್ ಹಾಗೂ ಪ್ರಸ್ತುತ ಆಗಸ್ಟ್ ತಿಂಗಳ ಮಾಹೆಯಲ್ಲಿ ತಾಲ್ಲೂಕಿನಾದ್ಯಂತ ಒಟ್ಟು 496.06 ಎಂ.ಎಂ. ಮಳೆಯಾಗಿದ್ದು, ನಿಧಾನಗತಿಯಲ್ಲಿದ್ದ ಕೃಷಿ ಚಟುವಟಿಕೆಯಲ್ಲಿ ದಿಢೀರ್ ಚೇತರಿಕೆ ಕಂಡಿದೆ ಎಂದು ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್ ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿ ನೀಡಿ, ಪ್ರಸ್ತುತ ವರ್ಷ ತಾಲ್ಲೂಕಿನಾದ್ಯಂತ ಕೇವಲ 39 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿತ್ತು. ಈ ಬಾರಿಯೂ ಸಹ ರೈತರು ಬಿತ್ತನೆ ಮಾಡಲು ಹಿಂದೇಟು ಹಾಕುವ ಕಾಲ ಒದಗಿತ್ತು. ಆದರೆ, ವರುಣನ ಕೃಪೆಯಿಂದ ತಾಲ್ಲೂಕಿನಾದ್ಯಂತ ಒಟ್ಟು 87765 ಹೆಕ್ಟೇರ್ ಪ್ರದೇಶದಲ್ಲಿ ಈಗ 78119 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಕಾರ್ಯ ಅಂತ್ಯವಾಗಿದೆ. ಶೇ. 89ರಷ್ಟು ಬಿತ್ತನೆಯಾಗಿದ್ದು ಉತ್ತಮ ಬೆಳೆಯನ್ನು ಪಡೆಯುವ ನಿಟ್ಟಿನಲ್ಲಿ ರೈತರಿಗೆ ಕೆಲವೊಂದು ಸಲಹೆಯನ್ನು ಇಲಾಖೆಯಿಂದ ನೀಡುತ್ತಿದ್ದು ಅದನ್ನು ಪಾಲಿಸುವಂತೆ ಮನವಿ ಮಾಡಿದರು.



ಗ್ರಾಮೀಣ ಪ್ರದೇಶಗಳಲ್ಲಿ ಮಳೆ ಹಿನ್ನೆಲೆಯಲ್ಲಿ ತೇವಾಂಶ ಹೆಚ್ಚಾಗಿದೆ. ಕೆಲವೊಂದು ರೋಗಗಳು ಕಾಣಿಸಿಕೊಳ್ಳುವ ಅಪಾಯವಿದೆ. ಈ ಹಿನ್ನೆಲೆಯಲ್ಲಿ ವಿಜ್ಞಾನಿಗಳು ಸಲಹೆ ನೀಡಿ ನಿಗದಿಪಡಿಸಿದ ಗೊಬ್ಬರಗಳನ್ನು ಸಿಂಪಡಿಸಬೇಕೆಂದು ಅವರು ಮನವಿ ಮಾಡಿದ್ದಾರೆ. ತಾಲ್ಲೂಕಿನಾದ್ಯಂತ 51440 ಹೆಕ್ಟೇರ್ ಪ್ರದೇಶದಲ್ಲಿ ಶೇಂಗಾ, 11242 ಹೆಕ್ಟೇರ್‌ನಲ್ಲಿ ತೊಗರಿ, 6485 ಹೆಕ್ಟೇರ್‌ನಲ್ಲಿ ಮೆಕ್ಕೆಜೋಳ, 1853 ಹೆಕ್ಟೇರ್ ಪ್ರದೇಶದಲ್ಲಿ ಸಿರಿಧಾನ್ಯ ಹಾಗೂ 360 ಹೆಕ್ಟೇರ್ ಪಪ್ರದೇಶದಲ್ಲಿ ಹರಳು ಬಿತ್ತನೆಯಾಗಿದೆ.

ಕೃಷಿ ವಿಜ್ಞಾನಿಗಳ ಸೂಚನೆಯಂತೆ 45ರಿಂದ50 ದಿನದ ಅಂತರದಲ್ಲಿ ಶೇಂಗಾ ಬೆಳೆಗೆ ಮೇಲು ಗೊಬ್ಬರ ಹಾಕಬೇಕಿದೆ. ಯೂರಿಯಾ, ಎನ್‌ಪಿಕೆ, ಮಿಶ್ರಣ ಗೊಬ್ಬರ, ನ್ಯಾನೋ ಯೂರಿಯಾ ಮತ್ತು ನ್ಯಾನೋ ಡಿ.ಎ.ಪಿ ದ್ರವರೂಪದ ಗೊಬ್ಬರಗಳ ಸಿಂಪರಣೆಗೆ ಇದು ಸಕಾಲ ಎಂದಿದ್ದಾರೆ. ಹೆಚ್ಚಿನ ಮಾಹಿತಿಗೆ ಉಪಕೃಷಿ ನಿರ್ದೇಶಕರು, ಸಹಾಯಕ ಕೃಷಿ ನಿರ್ದೇಶಕರು, ಕೃಷಿ ಸಹಾಯಕರು ಹಾಗೂ ರೈತ ಸಂಪರ್ಕ ಕೇಂದ್ರಗಳನ್ನು ಭೇಟಿ ಮಾಡಲು ಮನವಿ ಮಾಡಿದ್ದಾರೆ.

## ವಿಶ್ವ ಛಾಯಾಗ್ರಹಣ ದಿನಾಚರಣೆ

**ದಾವಣಗೆರೆ:** ಜಿಲ್ಲಾ ಫೋಟೋಗ್ರಾಫರ್ಸ್ ಮತ್ತು ವಿಡಿಯೋಗ್ರಾಫರ್ಸ್ ಸಂಘದ ವತಿಯಿಂದ ಆಗಸ್ಟ್ 24 ಹಾಗೂ 25 ರಂದುಬೆಳಗ್ಗೆ 10.30ಕ್ಕೆ ನಗರದ ಬಾಪೂಜಿ ಬ್ಯಾಂಕ್ ಸಮುದಾಯ ಭವನದಲ್ಲಿ 185 ನೇ ವಿಶ್ವ ಛಾಯಾಗ್ರಹಣ ದಿನಾಚರಣೆ ಹಿನ್ನೆಯಲ್ಲಿ ದೇವನಗರಿ ಫೋ ಇಮೇಜ್ 2024 ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಅಸೋಸಿಯೇಷನ್ ಅಧ್ಯಕ್ಷರಾದ ಶ್ರೀನಾಥ್ ಪಿ.ಅಗಡಿ ಹೇಳಿದರು.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿ ವರ್ಷ ಜೊಲ್ಲಾ ಮಟ್ಟದಲ್ಲಿಸಮಾರಂಭ ಮಾಡಲಾಗುತ್ತಿತ್ತು. ಈಬಾರಿ ಅಂತರಾಷ್ಟ್ರೀಯ ಮಟ್ಟದಲ್ಲಿ ಸಮಾರಂಭ ಆಯೋಜನೆ ಮಾಡುವ ಉದ್ದೇಶದಿಂದ ಏಳು ಜಿಲ್ಲೆಗಳ ಸಹಯೋಗದೊಂದಿಗೆ ಪ್ರದರ್ಶನ ಆಯೋಜಿಸಿದ್ದೇವೆ ಸುಮಾರು45 ಅಂತರಾಷ್ಟ್ರೀಯ ಕಂಪನಿಗಳು ಪ್ರದರ್ಶನದಲ್ಲಿ ಭಾಗವಹಿಸಲಿವೆ ಎಂದರು.ಆ.24ರಂದು ಬೆಳಗ್ಗೆ 11.30ಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್.ಮಲ್ಲಿಕಾರ್ಜುನ್ ಹಾಗೂ ಶಾಸಕ ಶಾಮನೂರು ಶಿವಶಂಕರಪ್ಪ ಸಮಾರಂಭದ ಉದ್ಘಾಟನೆ ಮಾಡಲಿದ್ದಾರೆ.

---

## ಪ್ರಮುಖ ಸುದ್ದಿ

### ಕಲಿಕಾಸಕ್ತಿ ಮತ್ತು ದುಶ್ಚಟಗಳಿಂದ ದೂರ ಉಳಿಯುವಿಕೆ ಕುರಿತು ವಿಚಾರ ಸಂಕಿರಣ

# ಅಂಕ ಜೊತೆಗೆ ಉಪಯುಕ್ತ ಶಿಕ್ಷಣ ಪಡೆಯುವಂತಾಗಲಿ

» **ದಾವಣಗೆರೆ**

ಭಾರತ ಜನಸಂಖ್ಯೆ, ಯುವ ಸಂಪತ್ತು, ಅರ್ಥ್ಯೆಸುವಿಕೆಯಲ್ಲಿ ಜಗತ್ತಿಗೆ ಮೊದಲ ಸ್ಥಾನದಲ್ಲಿದೆ. ಇದನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಯುವ ಸಂಪತ್ತು ಸದ್ಬಳಕೆಯಾಗಬೇಕು, ಇದಕ್ಕಾಗಿ ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರ ಉಳಿದು ಕಲಿಯುವ ಶಿಕ್ಷಣ ಜೀವನಕ್ಕೆ ಮಾರ್ಗಸೂಚಿ ಮತ್ತು ಸದುಪಯೋಗವಾಗಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣ ವರ ತಿಳಿಸಿದರು.

ಅವರು ಶುಕ್ರವಾರ ದಾವಣಗೆರೆ ತಾಲ್ಲೂಕಿನ ಆನಗೋಡು ಜಿ.ಚನ್ನಪ್ಪ ಪದವಿ ಪೂರ್ವ ಕಾಲೇಜಿನಲ್ಲಿ ಮದ್ಯಪಾನ ಸಂಯಮ ಮಂಡಳಿ, ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮಾತೃಶ್ರೀ ನಗರ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾದ ಕಲಿಕಾಸಕ್ತಿ ಮತ್ತು ದುಶ್ಚಟಗಳಿಂದ ದೂರ ಉಳಿಯುವ ಕುರಿತು ಏರ್ಪಡಿಸಲಾದ ವಿಚಾರ ಸಂಕಿರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ವಿದ್ಯಾರ್ಥಿಗಳಿಗೆ ಪ್ರಾಥಮಿಕ, ಮಾಧ್ಯಮಿಕ, ಪ್ರೌಢಶಾಲೆ ಹಾಗೂ ಪದವಿ ಪೂರ್ವ ಶಿಕ್ಷಣದ ಹಂತಗಳಲ್ಲಿ ಕಲಿಕಾಸಕ್ತಿ ಮೂಡಿಸುವುದು ಬಹಳ ಅಗತ್ಯವಾಗಿರುತ್ತದೆ. ಇದರಿಂದ ಮಕ್ಕಳಲ್ಲಿನ ಶೈಕ್ಷಣಿಕ ಪ್ರಗತಿ ಹೆಚ್ಚಿಸಲು ಹೆಚ್ಚಿನ ಸಹಕಾರಿಯಾಗಲಿದೆ. ವಿವಿಧ ಹಂತದ ತರಗತಿಗಳ ಪಠ್ಯಕ್ರಮಗಳು ಸಾಮಾಜಿಕ, ಆರ್ಥಿಕ, ವೈಜ್ಞಾನಿಕ ಬದಲಾವಣೆ ಆದಂತೆ ಪರಿಷ್ಕರಣೆಗೆ ಒಳಗಾಗಲಿದ್ದು ಇದು ನಿರಂತರ ಪ್ರಕ್ರಿಯೆಯಾಗಿರುತ್ತದೆ. ವಿದ್ಯಾರ್ಥಿಗಳು ಕೇವಲ ಅಂಕ ಗಳಿಕೆಗಷ್ಟೆ ಸೀಮಿತವಾಗಿ ವ್ಯಾಸಂಗ ಮಾಡದೆ, ವಿಷಯ ಅರ್ಥೈಸಿಕೊಂಡು ಜೀವನಕ್ಕೆ ಉಪಯೋಗವಾಗುವ ನಿಟ್ಟಿನಲ್ಲಿ ಓದಬೇಕು ಎಂದರು. ವಿದ್ಯಾರ್ಥಿಗಳಿಗೆ ಹಿಂದೆ ಗುರು, ಮುಂದೆ ಗುರಿ ಇರಬೇಕೆಂಬಂತೆ ವಿದ್ಯಾರ್ಥಿ ಜೀವನವಿರಬೇಕು, ಇದರಿಂದ ಯಾವುದೇ ದುಶ್ಚಟಗಳಿಗೆ ಬಲಿಯಾಗುವುದಿಲ್ಲ. ಮದ್ಯ, ಧೂಮಪಾನ, ಮಾದಕ ವಸ್ತುಗಳ ಸೇವನೆಯಷ್ಟೆ ದುಶ್ಚಟವಲ್ಲ, ಅನಾವಶ್ಯಕ ಮೊಬೈಲ್ ಬಳಕೆ, ಸುಳ್ಳು ಹೇಳುವುದು, ಪೋಷಕರು ನೀಗಿಸದೇ ಇರುವಂತಹ ದುಬಾರಿ ವಸ್ತುಗಳು ಬೇಕೆಂದು ಒತ್ತಾಯ ಮಾಡುವುದು, ಇವೆಲ್ಲವೂ ಮಕ್ಕಳಿಂದ ದೂರವಾಗಿ ಪೋಷಕರ ಅಪೇಕ್ಷೆಗನುಗುಣವಾಗಿ ನಡೆದುಕೊಂಡು ಚನ್ನಾಗಿ ಓದುವ ಮೂಲಕ ತಂದೆ, ತಾಯಿಯ ಋಣ ತೀರಿಸಬೇಕೆಂದು ಶಪಥ ಮಾಡಬೇಕೆಂದು ವಿದ್ಯಾರ್ಥಿಗಳ ಕುರಿತು ಮಾತನಾಡಿದರು.

ಕಾಲೇಜಿನ ಪ್ರಾಂಶುಪಾಲರಾದ ಕಾವೇರಿ ಗೌಡರ್ ಅಧ್ಯಕ್ಷತೆ ವಹಿಸಿದ್ದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಧನಂಜಯ.ಬಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಇತಿಹಾಸ ಉಪನ್ಯಾಸಕರಾದ ಹೆಚ್.ಪಿ.ಯಶವಂತ್ ಕುಮಾರ್, ಮಾತೃಶ್ರೀ ಸಂಸ್ಥೆ ಅಧ್ಯಕ್ಷರಾದ ಕಿರಣ್ ಎ.ಎಲ್ ಕಲಿಕಾಸಕ್ತಿ ಕುರಿತಂತೆ ಮಾತನಾಡಿದರು. ವಿದ್ಯಾರ್ಥಿ ನವೀತಾ ಸ್ವಾಗತಿಸಿದರು, ಮಾತೃಶ್ರೀ ಸಂಸ್ಥೆ ಲಕ್ಷ್ಮಿ.ಪಿ ನಿರೂಪಿಸಿದರು. ಉಪನ್ಯಾಸಕರಾದ ಡಾ; ಅಜ್ಜಯ್ಯ ವಂದಿಸಿದರು.

## ಫಾಸ್ಟ್ ನ್ಯೂಸ್

### ಯುವತಿ ಕಾಣೆ

» ಚಿತ್ರದುರ್ಗ

ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಸೀಗೆಹಟ್ಟಿ ಗ್ರಾಮದ ನಿವಾಸಿ ಎಸ್.ಕಾವ್ಯ ತಂದೆ ಶಿವಣ್ಣ (15 ವರ್ಷ) ಕಾಣೆಯಾದ ಕುರಿತು ಜುಲೈ 17 ರಂದು ಹಿರಿಯೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ಎಸ್.ಕಾವ್ಯ 4ಅಡಿ ಎತ್ತರ, ಕೋಲುಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ಹಸಿರು ಬಣ್ಣದ ನೈಟಿಯನ್ನು ಧರಿಸಿರುತ್ತಾರೆ. ಯುವತಿಯ ಕುರಿತು ಮಾಹಿತಿ ಕಂಡುಬಂದಲ್ಲಿ ಹಿರಿಯೂರು ಗ್ರಾಮಾಂತರ ಠಾಣೆ ದೂರವಾಣಿ ಸಂಖ್ಯೆ 08193-263555, ಪಿಎಸ್ಐ ದೂರವಾಣಿ ಸಂಖ್ಯೆ 9480803115 ಡಿವೈಎಸ್ಪಿ ಕಚೇರಿ ದೂರವಾಣಿ ಸಂಖ್ಯೆ 08193-263499, ಜಿಲ್ಲಾ ನಿಸ್ತಂತು ಕೇಂದ್ರ ದೂರವಾಣಿ ಸಂಖ್ಯೆ 08194-222782 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಮಹಿಳೆ ಕಾಣೆ

» ಚಿತ್ರದುರ್ಗ

ಹಿರಿಯೂರು ನಗರದ ಡಿ ಸಿ ಕಾಲೋನಿಯ ನೂರ್ ಜಹಾನ್ ಗಂಡ ಚಮನ್ ಸಾಬ್ (42 ವರ್ಷ) ಕಾಣೆಯಾದ ಕುರಿತು ಮಾರ್ಚ್ 26 ರಂದು ಹಿರಿಯೂರು ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ನೂರ್ ಜಹಾನ್, ಸು.5 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ ಹೊಂದಿದ್ದು, ಕನ್ನಡ ಮತ್ತು ಉರ್ದು ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ಗುಲಾಬಿ ಬಣ್ಣದ ಚೂಡಿದಾರ್ ಮತ್ತು ಕಪ್ಪು ಬಣ್ಣದ ಬುರ್ಕಾ ಧರಿಸಿರುತ್ತಾರೆ. ಮಹಿಳೆಯ ಕುರಿತು ಮಾಹಿತಿ ದೊರೆತಲ್ಲಿ ಹಿರಿಯೂರು ನಗರ ಠಾಣೆ ದೂರವಾಣಿ ಸಂಖ್ಯೆ 08193-263444, ಡಿವೈಎಸ್ಪಿ ಕಚೇರಿ ದೂರವಾಣಿ ಸಂಖ್ಯೆ 08193-263499, ಜಿಲ್ಲಾ ನಿಸ್ತಂತು ಕೇಂದ್ರ ದೂರವಾಣಿ ಸಂಖ್ಯೆ 08194-222782 ಗೆ ಸಂಪರ್ಕಿಸಿ.

### ಮಹಿಳಾ ಅಭಿವೃದ್ಧಿ ನಿಗಮ: ಸೌಲಭ್ಯಗಳಿಗೆ ಅರ್ಜಿ

» ಚಿತ್ರದುರ್ಗ

2024-25ನೇ ಸಾಲಿಗೆ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವು ಅನುಷ್ಠಾನಗೊಳಿಸುತ್ತಿರುವ ಚೇತನ, ಧನಶ್ರೀ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ, ದೇವದಾಸಿ ಪುನರ್ವಸತಿ ಹಾಗೂ ಉದ್ಯೋಗಿನಿ ಯೋಜನೆಗಳಿಗೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸೆಪ್ಟೆಂಬರ್ 21 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅರ್ಜಿದಾರರು ಹತ್ತಿರದ ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದು. 2023-24ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇದ್ದವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅಗತ್ಯವಿರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಜಿಲ್ಲಾ ಅಭಿವೃದ್ಧಿ ನಿರೀಕ್ಷಕಕರ ಕಚೇರಿ ಅಥವಾ ದೂರವಾಣಿ ಸಂಖ್ಯೆ 7019967954 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ನಾಗಪುರ ದೀಕ್ಷಾ ಭೂಮಿ ಯಾತ್ರೆಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಮುಂಬರುವ ಅಕ್ಟೋಬರ್ 12 ತಾರೀಕಿನ ಶನಿವಾರ ವಿಜಯದಶಮಿ ದಿನದಂದು ಮಹಾರಾಷ್ಟ್ರದ ನಾಗಪುರ ದೀಕ್ಷಾ ಭೂಮಿಯಲ್ಲಿ ನಡೆಯುವ ದಮ್ಮ ಪ್ರವರ್ತನ ದಿನ ಕಾರ್ಯಕ್ರಮಕ್ಕೆ ತೆರಳಲು ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 15 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ಆಗಸ್ಟ್ 31 ಅರ್ಜಿ ಸಲ್ಲಿಸಲು ಕಡೆಯ ದಿನವಾಗಿದೆ. ಪ್ರತಿ ವರ್ಷದಂತೆ ಅಕ್ಟೋಬರ್ 10 ರಿಂದ 14ರವರೆಗೆ ನಾಗಪುರ ದೀಕ್ಷಾಭೂಮಿ ಯಾತ್ರೆಗೆ ತೆರಳಲು ಸಾರಿಗೆ ವ್ಯವಸ್ಥೆ, ರೈಲಿನ ವ್ಯವಸ್ಥೆ ಕಲ್ಪಿಸುವ ಸಂಬಂದ, ರಾಜ್ಯದ ಡಾ.ಬಿ.ಆರ್.ಅಂಬೇಡ್ಕರ್ ಅನುಯಾಯಿಗಳನ್ನು ಆಯ್ಕೆ ಮಾಡಲಾಗುವುದು. ಯಾತ್ರಿಗಳು ಬಿ.ಪಿ.ಎಲ್.ಕಾರ್ಡ ಹೊಂದಿರಬೇಕು. ಎಸ್.ಟಿ, ಎಸ್.ಸಿ ಸಮುದಾಯಕ್ಕೆ ಸೇರಿದವರಾಗಿರಬೇಕು. ಇತರೆ ಸಮುದಾಯದ ಜನರು ಬಾಬಾ ಸಾಹೇಬ್ ಅಂಬೇಡ್ಕರ್ ಅನುಯಾಯಿಗಳು ಅಹ ಯಾತ್ರೆ ಕೈಗೊಳ್ಳಬಹುದು. ಯಾತ್ರಾತ್ರಿಗಳು ಕನಿಷ್ಠ 18 ವರ್ಷ ಮೇಲ್ಪಟವರಾಗಿರಬೇಕು. ಡಾ.ಬಿ.ಆರ್. ಅಂಬೇಡ್ಕರ್ ರವರ ಚಿಂತನೆಗಳ ಬಗ್ಗೆ ಅರಿವು ಹೊಂದಿದ್ದು, ಸಮಾಜ ಸೇವೆ ಮಾಡಿದ ಅನುಭವ ಹೊಂದಿರಬೇಕು. ಈಗಾಗಲೇ ಸರ್ಕಾರದ ವೆಚ್ಚದಲ್ಲಿ ಒಮ್ಮೆ ನಾಗಪುರ ದೀಕ್ಷಾ ಭೂಮಿಗೆ ಪ್ರವಾಸ ಮಾಡಿದವರು ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ. ಸರ್ಕಾರಿ ಮತ್ತು ಅದರ ಅಂಗಸಂಸ್ಥೆಗಳಲ್ಲಿ ಸೇವೆಯಲ್ಲಿರುವವರು ಅರ್ಹರಲ್ಲ. ರಾಜ್ಯದಲ್ಲಿ ಆಯಾ ಜಿಲ್ಲೆಗಳಿಂದಲೇ ನಾಗಪುರಕ್ಕೆ ಹೋಗಿ ಬರಲು ತಗಲುವ ಪ್ರಯಾಣದ ವೆಚ್ಚವನ್ನು ಮಾತ್ರ ಸರ್ಕಾರದಿಂದ ಭರಿಸಲಾಗುವುದು. ವಸತಿ ಮತ್ತು ಭೋಜನಾ ವೆಚ್ಚವನ್ನು ಯಾತ್ರಾರ್ಥಿಗಳೇ ಭರಿಸತಕ್ಕದ್ದು. ಆಸಕ್ತ ಯಾತ್ರಾರ್ಥಿಗಳು https://swdservice.karnataka.gov.in ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಮೊಳಕಾಲ್ಮುರು ಪಪಂ ಗದ್ದುಗೆ ಏರಿದ ಬಿಜೆಪಿ

» ನಮ್ಮಜನ ಸಮಾಚಾರ
ಮೊಳಕಾಲ್ಮುರು

ತೀವ್ರ ಕುತೂಹಲ ಕೆರಳಿಸಿದ್ದ ಪಟ್ಟಣ ಪಂಚಾಯಿತಿ ಫಲಿತಾಂಶ ಶುಕ್ರವಾರ ಮಧ್ಯಾಹ್ನ 1 ಗಂಟೆಗೆ ಹೊರ ಬಿದ್ದಿದೆ.

ಪಟ್ಟಣ ಪಂಚಾಯಿತಿಯಲ್ಲಿ ಒಟ್ಟು 16 ಸದಸ್ಯರುಳ್ಳ ಸ್ಥಳೀಯ ಪಟ್ಟಣ ಪಂಚಾಯಿತಿಗೆ ಬಿಜೆಪಿಯಿಂದ ಲೀಲಾವತಿ ಸಿದ್ದಣ್ಣ ಮತ್ತು ಕಾಂಗ್ರೆಸ್ ನಿಂದ ವಿಜಯಮ್ಮ ಅಧ್ಯಕ್ಷ ಸ್ಥಾನ ಆಯ್ಕೆ ಬಯಸಿ ಉಮೇದುವಾರಿಕೆ ಸಲ್ಲಿಸಿದ್ದರು.

ಇನ್ನು ಪ.ಪಂ ಉಪಾಧ್ಯಕ್ಷ ಸ್ಥಾನವು ಸಾಮಾನ್ಯ ವರ್ಗಕ್ಕೆ ಮೀಸಲಿಗೆ ಬಿಜೆಪಿಯಿಂದ ತಿಪ್ಪೇಸ್ವಾಮಿ ಮತ್ತು ಕಾಂಗ್ರೆಸ್ ಪಕ್ಷದಿಂದ ಎಂ.ಅಬ್ದುಲ್ಲ ಉಮೇದುವಾರಿಕೆ ಸಲ್ಲಿಸಿದ್ದರು.

ಬಿಜೆಪಿಯಿಂದ ಸ್ಪರ್ಧಿಸಿದ್ದ ಲೀಲಾವತಿ ಸಿದ್ದಣ್ಣಗೆ ಬಿಜೆಪಿ 8ಸದಸ್ಯರು ಮತ್ತು ಪಕ್ಷೇತರ ಇಬ್ಬರು ಸದಸ್ಯರು ಮತ್ತು ಸಂಸದರ ಒಂದು ಮತ ಸೇರಿದಂತೆ ಒಟ್ಟು 11 ಮತಗಳು ಪಡೆಯುವ ಮೂಲಕ ವಿಜಯಶಾಲಿಯಾದರೆ



ಪ್ರತಿಸ್ಪರ್ದಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ವಿಜಯಮ್ಮ 06ಮತಗಳು ಪಡೆಯುವ ಮೂಲಕ ಸೋಲುಂಡಿದ್ದಾರೆ.

ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ತಿಪ್ಪೇಸ್ವಾಮಿ 11ಮತಗಳು ಪಡೆಯುವ ಮೂಲಕಉಪಾಧ್ಯಕ್ಷಸ್ಥಾನಕ್ಕೆಆಯ್ಕೆಯಾದರೆ ಪ್ರತಿಸ್ಪರ್ದಿ ಅಬ್ದುಲ್ಲ 6 ಮತಗಳನ್ನು ಪಡೆದು ಪರಭಾವಗೊಂಡಿದ್ದಾರೆ.

ಪಟ್ಟಣ ಪಂಚಾಯಿತಿ ಬಿಜೆಪಿ ಪಕ್ಷಕ್ಕೆ ಅಧಿಕಾರದ ಗದ್ದುಗೆ ಹಿಡಿಯುತ್ತಿದ್ದಂತೆ ಕಾರ್ಯಕರ್ತರು ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಸಂಸದ ಗೋವಿಂದ ಕಾರಜೋಳ, ಮಾಜಿ ಶಾಸಕ ತಿಪ್ಪೇಸ್ವಾಮಿ, ಪ.ಪಂ ಮಾಜಿ ಅಧ್ಯಕ್ಷರಾದ ಪಿ. ಲಕ್ಷ್ಮಣ್, ರವಿಕುಮಾರ್ ಸದಸ್ಯರಾದ ರೂಪ ವಿನಯ್, ಶುಭ, ಸವಿತಾ ಅರ್ಜುನ್ ಮತ್ತು ಬಿಜೆಪಿ ಜಿಲ್ಲಾಧ್ಯಕ್ಷರಾದ ಮುರುಳಿ, ಬಿಜೆಪಿ ಮಂಡಲಾದ್ಯಕ್ಷರಾದ ಡಾ. ಮಂಜುನಾಥ್, ಬಿಜೆಪಿ ಮುಖಂಡರಾದ ಚಂದ್ರಶೇಖರ್ ಗೌಡ,ಮುರಾರ್ಜಿ ಸೇರಿದಂತೆ ಹಲವರಿದ್ದರು.

# ಸಾಹಿತಿಗಳು ಮಕ್ಕಳ ಸಾಹಿತ್ಯ ಕೃತಿಗಳನ್ನು ರಚಿಸುವುದಕ್ಕೆ ಹೆಚ್ಚು ಒತ್ತು ನೀಡಬೇಕು

» ಚಿತ್ರದುರ್ಗ

ಮಕ್ಕಳ ಸಾಹಿತ್ಯ ಜ್ಞಾನದ ಜೊತೆಗೆ ಮಕ್ಕಳಿಗೆ ಬದುಕುವ ಕಲೆಯನ್ನು ಕಲಿಸುತ್ತದೆ. ಸಾಹಿತಿಗಳು ಮಕ್ಕಳ ಸಾಹಿತ್ಯ ಕೃತಿಗಳನ್ನು ರಚಿಸುವುದಕ್ಕೆ ಹೆಚ್ಚು ಒತ್ತು ನೀಡಬೇಕಿದೆ. ಮಕ್ಕಳ ಸಾಹಿತ್ಯದಲ್ಲಿ ನವ ಸಾಹಿತಿಗಳ ಅಗತ್ಯವಿದೆ ಎಂದು ಚಿತ್ರದುರ್ಗ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಯೋಗೀಶ್ ಸಹ್ಯಾದ್ರಿ ಅಭಿಪ್ರಾಯಪಟ್ಟರು.

ಚಿತ್ರದುರ್ಗ ತಾಲೂಕಿನ ಡಿ.ಎಸ್. ಹಳ್ಳಿಯ ಜ್ಞಾನಪೂರ್ಣ ಶಾಲೆಯಲ್ಲಿ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗಿದ್ದ 'ಮಕ್ಕಳ ಸಾಹಿತ್ಯ ಶ್ರಾವಣ - 2024' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಉಪನ್ಯಾಸಕ ಯೋಗೀಶ್ ಸಹ್ಯಾದ್ರಿ, ಇಂದಿನ ಮಕ್ಕಳಲ್ಲಿ ಅದಮ್ಯ ಚೈತನ್ಯ ಅಡಗಿದೆ. ವಿದ್ಯಾರ್ಥಿ ಗಳನ್ನು ಸಾಹಿತ್ಯ ಕ್ಷೇತ್ರದಲ್ಲಿ ತೊಡಗಿಸುವುದರಿಂದ ವಿಶ್ವ ಸಾಹಿತ್ಯಕ್ಕೆ ಅಮೋಘ ಕೊಡುಗೆ ನೀಡಬಲ್ಲದರು. ಮಕ್ಕಳ ಸಾಹಿತ್ಯದ ಅಭಿರುಚಿ ಸಾಮಾನ್ಯ ಜನರನ್ನು ಸಹ ತಲುಪಬೇಕು ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ ದಶಮಾನೋತ್ಸವ ಆಚರಿಸುತ್ತಿರುವ ಈ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಸರಣಿ ಸಾಹಿತ್ಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಹಾಗು ಜಿಲ್ಲಾ ಸಾಹಿತ್ಯ ಸಮ್ಮೇಳನ ಆಯೋಜಿಸುವ ಕುರಿತು ಸಹ ಚಿಂತನೆ ನಡೆಯುತ್ತಿದೆ. ಆದ್ದರಿಂದ ವಿದ್ಯಾರ್ಥಿಗಳು ಈ ರೀತಿಯ ರಾಜ್ಯ ಮತ್ತು ರಾಷ್ಟ್ರೀಯ ಸಮ್ಮೇಳನಗಳಲ್ಲಿ ಭಾಗವಹಿಸಲು ಹೆಚ್ಚು ಕನ್ನಡ ಪುಸ್ತಕಗಳನ್ನು ಓದಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಆಗಮಿಸಿದ್ದ ಚಿತ್ರದುರ್ಗ



ಎಸ್ ಆರ್ ಎಸ್ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾದ ಅಣ್ಣಪ್ಪ ಎಚ್ ಮಾತನಾಡಿ, ಸಾಹಿತ್ಯ ಒಂದು ಭಾಷೆಯಾಗಿ ಮಾತ್ರ ಸೀಮಿತವಾಗಿಲ್ಲ , ಅದು ಮನುಷ್ಯನ ಸಂಸ್ಕಾರದ ಸಂವಹನ ಮಾಧ್ಯಮ , ಕನ್ನಡ ಸಾಹಿತ್ಯದಲ್ಲಿ ಪಂಪ ಪೊನ್ನ ರನ್ನ ರೀತಿಯಲ್ಲಿ ಮಕ್ಕಳ ಸಾಹಿತ್ಯದಲ್ಲೂ ಪಂಜೆ ಮಂಗೇಶರಾಯರು, ಅರಗ ಲಕ್ಷ್ಮಣರಾವ್ ಮತ್ತು ಜಿ ಪಿ ರಾಜರತ್ನಂ ರಂತಹ ರತ್ನತ್ರಯರು ಇದ್ದಾರೆ ಇವರೆಲ್ಲಾ ಬರೆದಿರುವ ಸಾಹಿತ್ಯ ಮಕ್ಕಳ ಬೌದ್ಧಿಕ ಮಟ್ಟಕ್ಕೆ ಹತ್ತಿರವಾಗುತ್ತಿವೆ. ಭಾಷೆಗೆ ಎಷ್ಟೊಂದು ಶಕ್ತಿ ಇದೆ ಭಾಷೆಗೆ ಮೂಕ ಪ್ರಾಣಿಗಳೊಂದಿಗೂ ಮಾತನಾಡುವ ಶಕ್ತಿ ಇರುವುದು ವಿಶೇಷ. ಸಾಹಿತ್ಯ ಹಿರಿಯರಿಗೆ,ಪಂಡಿತ ಪಾಮರರಿಗೆ ಮಾತ್ರವಲ್ಲ ಚಿಕ್ಕವರಿಂದಲೇ ಸಾಹಿತ್ಯದಂತಹ ಅಭಿರುಚಿಯನ್ನು ಬೆಳೆಸಬೇಕು ಏಕೆಂದರೆ ಈ ದೇಶದ ಸಂಪತ್ತು ಮಕ್ಕಳು. ಅವರಿಗಾಗಿಯೇ ಮಕ್ಕಳ ಸಾಹಿತ್ಯ ಪರಿಷತ್ ಇದೆ ಎಂದು ಹೇಳಿದರು.

ಜ್ಞಾನಪೂರ್ಣ ಸಮೂಹ ಸಂಸ್ಥೆಗಳ ಕಾರ್ಯದರ್ಶಿ ಎನ್ ಎಲ್ ವೆಂಕಟೇಶ್ ರೆಡ್ಡಿ ಅಧ್ಯಕ್ಷತೆ ವಹಿಸಿ ಮಾತನಾಡಿ ಮಸಾಪ ಜಿಲ್ಲೆಯ ವಿದ್ಯಾರ್ಥಿಗಳಿಗಾಗಿ ಅತ್ಯುತ್ತಮ ಕಾರ್ಯಕ್ರಮಗಳನ್ನು ಮಾಡುತ್ತಾ ಬಂದಿದೆ. ಆದ್ದರಿಂದ ನಮ್ಮ ಶಾಲೆಯಲ್ಲಿ ಮಕ್ಕಳ ಸಾಹಿತ್ಯ ಪರಿಷತ್ ಶಾಲಾ ಘಟಕವನ್ನು ಆರಂಭಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜ್ಞಾನಪೂರ್ಣ ಸಮೂಹ ಸಂಸ್ಥೆಗಳ ಸಹಕಾರ್ಯದರ್ಶಿ ಶ್ರೀಮತಿ. ಸುಹಾಸಿನಿ ವೆಂಕಟೇಶ್ ರೆಡ್ಡಿ, ಆಡಳಿತಾಧಿಕಾರಿಗಳಾದ ಡಾ. ಸ್ವಾಮಿ ಕೆ.ಎನ್, ಜಿಲ್ಲಾ ಮ.ಸಾ.ಪ ಉಪಾಧ್ಯಕ್ಷ ಬಿ ವಿಜಯಕುಮಾರ್ ಹಾಗು ಜಿಲ್ಲಾ ಮಸಾಪ ಪದಾಧಿಕಾರಿಗಳು ಮತ್ತು ಶಾಲಾ ಸಿಬ್ಬಂದಿ, ಪೋಷಕರು ಉಪಸ್ಥಿತರಿದ್ದರು.

# ಮಳೆ ವರದಿ: ಚಿತ್ರದುರ್ಗ ಜಿಲ್ಲೆಯಲ್ಲಿ 2.7 ಮಿ.ಮೀ ಮಳೆ



» ಚಿತ್ರದುರ್ಗ

ಬುಧವಾರ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 2.7 ಮಿ.ಮೀ ಮಳೆಯಾಗಿದೆ.

ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 2.9 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 3.8 ಹಿರಿಯೂರು ತಾಲ್ಲೂಕು 0.2 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 1 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 0.3 ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 13.5 ಮಿ.ಮೀ ಮಳೆಯಾಗಿದೆ.

ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 0.3 ಮಿ.ಮೀ, ನಾಯಕನಹಟ್ಟಿ 9.8 ಮಿ.ಮೀ, ಪರಶುರಾಂಪುರ 0.4 ಮಿ.ಮೀ, ತಳಕು 2.7 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 0.9 ಮಿ.ಮೀ, ಭರಮಸಾಗರ 8.3 ಮಿ.ಮೀ, ಹಿರೇಗುಂಟನೂರು 1.9 ಮಿ.ಮೀ, ತುರುವನೂರು 5.3 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಐಮಂಗಲ 0.5 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 1.6 ಮಿ.ಮೀ, ಬಿ.ದುರ್ಗ 1.4 ಮಿ.ಮೀ, ರಾಮಗಿರಿ 1 ಮಿ.ಮೀ, ತಾಳ್ಯ 0.3 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 0.6 ಮಿ.ಮೀ, ಮಾಡದಕೆರೆ 0.3 ಮಿ.ಮೀ, ಶ್ರೀರಾಂಪುರ 0.2 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 10.4 ಮಿ.ಮೀ ಹಾಗೂ ದೇವಸಮುದ್ರದಲ್ಲಿ 71 ಮಿ.ಮೀ ಮಳೆಯಾಗಿದೆ.

33 ಮನೆಗಳು ಭಾಗಶಃ ಹಾನಿ: ಬುಧವಾರ ಸುರಿದ ಮಳೆಗೆ ಜಿಲ್ಲೆಯಾದ್ಯಂತ ಒಟ್ಟು 33 ಮನೆಗಳು ಭಾಗಶಃ ಹಾನಿ, 1 ಮನೆ ತೀವ್ರತರ ಮನೆಹಾನಿಯಾಗಿದ್ದು, 2 ಹೆಕ್ಟೇರ್ ತೋಟಗಾರಿಕೆ ಬೆಳೆ, 2 ಹೆಕ್ಟೇರ್ ಕೃಷಿ ಬೆಳೆ ಹಾನಿಯಾಗಿದೆ.

ಚಿತ್ರದುರ್ಗ ತಾಲ್ಲೂಕಿನಲ್ಲಿ 21 ಮನೆಗಳು ಭಾಗಶಃ ಹಾನಿ, ಚಳ್ಳಕೆರೆ ತಾಲ್ಲೂಕಿನಲ್ಲಿ 4 ಮನೆಗಳು ಭಾಗಶಃ ಹಾನಿ ಹಾಗೂ 2 ಹೆಕ್ಟೇರ್ ಕೃಷಿ ಬೆಳೆ ಹಾನಿಯಾಗಿವೆ. ಹೊಳಲ್ಕೆರೆ ತಾಲ್ಲೂಕಿನಲ್ಲಿ 5 ಭಾಗಶಃ ಹಾನಿಯಾಗಿವೆ. ಹೊಸದುರ್ಗ ತಾಲ್ಲೂಕಿನಲ್ಲಿ 1 ಮನೆ ಭಾಗಶಃ ಹಾನಿಯಾಗಿವೆ. ಮೊಳಕಾಲ್ಮುರು ತಾಲ್ಲೂಕಿನಲ್ಲಿ 3 ಮನೆಗಳು ಭಾಗಶಃ ಹಾನಿಯಾಗಿವೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ

## ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ವಿವಿಧ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನ

ದಾವಣಗೆರೆ: ಪ್ರಸಕ್ತ ಸಾಲಿಗೆ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಉದ್ಯೋಗಿನಿ, ಚೇತನಾ, ಧನಶ್ರೀ, ಲಿಂಗತ್ವ ಅಲ್ಪ ಸಂಖ್ಯಾತರ ಪುನರ್ವಸತಿಯೋಜನೆ ಹಾಗೂ ಮಾಜಿ ದೇವದಾಸಿ ಮಹಿಳೆಯರ ಪುನರ್ ವಸತಿ ಯೋಜನೆಗಳಡಿ ಸರ್ಕಾರದ ಸೇವಾ ಸಿಂಧು ಪೋರ್ಟಲ್ ಃಣಣಠಿ://ಜತಿಚಿಟಿಜಿಣ.ಇಚಿಡಿಟಿಚಿಣಚಿಞಚಿ.ರಂತ.ಟಿ ಅಂತರಜಾಲ ಜಾಲತಾಣದಲ್ಲಿ ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಈ ಎಲ್ಲಾ ಯೋಜನೆಗಳಿಗೆ ಅರ್ಜಿಗಳು ಸೇವಾಸಿಂಧು ಪೋರ್ಟಲ್ https://sevasindhu.karnataka.gov.in ನಲ್ಲಿ ಲಭ್ಯವಿರುತ್ತದೆ. ಅರ್ಜಿದಾರರು ಬಾಪೂಜಿ ಸೇವಾ ಕೇಂದ್ರ ಗ್ರಾಮ ಒನ್. ಬೆಂಗಳೂರು ಒನ್ ಕರ್ನಾಟಕ ಒನ್ ಕೇಂದ್ರಗಳಲ್ಲಿ ಸೆ.21 ರವರೆಗೆ ಅರ್ಜಿ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಹಾಗೂ ಉಪನಿರ್ದೇಶಕರ ಕಚೇರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ., ಎಂ.ಸಿ.ಸಿ."ಬಿ" ಬ್ಲಾಕ್, ಕುವೆಂಪು ನಗರ, 14 ನೇ ಮುಖ್ಯರಸ್ತೆ, ದಾವಣಗೆರೆ ಇಲ್ಲಿಗೆ ಸಂಪರ್ಕಿಸಬಹುದು.

## ಪ್ರಮುಖ ಸುದ್ದಿ

### ಆಗಸ್ಟ್ 27 ರಂದು ಕರ್ನಾಟಕ ಲೋಕಸೇವಾ ಆಯೋಗದಿಂದ ಗೆಜೆಟೆಡ್ ಪ್ರೊಬೇಷರ್ಸ್ ಪೂರ್ವಭಾವಿ ಪರೀಕ್ಷೆ

# ದಾವಣಗೆರೆ ನಗರದ 14 ಕೇಂದ್ರಗಳಲ್ಲಿ ಪರೀಕ್ಷೆಗೆ ಸಿದ್ದತೆ

» ದಾವಣಗೆರೆ

ಕರ್ನಾಟಕ ಲೋಕಸೇವಾ ಆಯೋಗದಿಂದ ಗ್ರೂಪ್ 'ಎ' ಮತ್ತು 'ಬಿ' ವೃಂದದ 384 ಹುದ್ದೆಗಳಿಗೆ ಆಗಸ್ಟ್ 27 ರಂದು ಪೂರ್ವಭಾವಿ ಪರೀಕ್ಷೆ ನಡೆಯಲಿದ್ದು ದಾವಣಗೆರೆನಗರದ14ಕೇಂದ್ರಗಳಲ್ಲಿಪರೀಕ್ಷೆ ನಡೆಯಲಿದೆ. ಪರೀಕ್ಷೆಯಲ್ಲಿ ಯಾವುದೇ ಲೋಪವಾಗದಂತೆ ಮುನ್ನೆಚ್ಚರಿಕೆ ವಹಿಸುವ ಮೂಲಕ ಎಲ್ಲಾ ಕೊಠಡಿಗಳಲ್ಲಿ ಸಿಸಿ ಟಿವಿ, ಬಾಡಿ ಕ್ಯಾಮೆರಾಗಳು ಸಕ್ರಿಯವಾಗಿರುವ ನಿಟ್ಟಿನಲ್ಲಿ ಎಲ್ಲಾ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚನೆ ನೀಡಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಪರೀಕ್ಷಾ ಪೂರ್ವಭಾವಿ ಸಿದ್ದತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಆ.27 ರ ಪೂರ್ವಭಾವಿ ಪರೀಕ್ಷೆಯ ಮೊದಲ ಪ್ರಶ್ನೆ ಪತ್ರಿಕೆ ಪರೀಕ್ಷೆಯು ಬೆಳಗ್ಗೆ 10 ರಿಂದ 12 ಗಂಟೆಯವರೆಗೆ ಮತ್ತು ಎರಡನೇ



ಪತ್ರಿಕೆಯ ಪರೀಕ್ಷೆ ಮಧ್ಯಾಹ್ನ 2 ರಿಂದ ಸಂಜೆ 4 ಗಂಟೆಯವರೆಗೆ ನಡೆಯಲಿದೆ. ಪರೀಕ್ಷೆ ಆರಂಭಕ್ಕೂ ಒಂದು ಗಂಟೆ ಮುಂಚಿತವಾಗಿ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದಲ್ಲಿರಬೇಕು. ಈ ಎಲ್ಲಾ ಅಭ್ಯರ್ಥಿಗಳ ಪ್ರವೇಶ ಪತ್ರ, ಮೂಲ ಗುರುತಿನ ಚೀಟಿ ಪರಿಶೀಲನೆ ನಂತರವೇ ಕೇಂದ್ರದೊಳಗೆ ಬಿಡಬೇಕು. ಮತ್ತು ಎಲ್ಲಾ ಪರೀಕ್ಷಾ ಕೊಠಡಿಗಳಲ್ಲಿ ಸಿಸಿ ಕ್ಯಾಮೆರಾ ಮತ್ತು ಬಾಡಿ ಕ್ಯಾಮೆರಾಗಳ ಮೂಲಕ ಪರೀಕ್ಷಾ ಎಲ್ಲಾ ಪ್ರಕ್ರಿಯೆಗಳನ್ನು ಸೆರೆಯಾಗುವಂತೆ ನೋಡಿಕೊಂಡು, ಅಭ್ಯರ್ಥಿಗಳು ಹಾಗೂ ಸಂವೀಕ್ಷಕರ ಚಲನವಲಗಳ ಬಗ್ಗೆ ಹೆಚ್ಚಿನ ನಿಗಾವಹಿಸುವ ಕೆಲಸವನ್ನು ಮಾಡಬೇಕಾಗಿದೆ. ಅಭ್ಯರ್ಥಿಗಳನ್ನು ಕಟ್ಟುನಿಟ್ಟಾಗಿ ತಪಾಸಣೆ ಕೈಗೊಂಡು ಯಾವುದೇ ಅಭ್ಯರ್ಥಿಗಳ ಕಿವಿಯಲ್ಲಿ ಎಲೆಕ್ಟ್ರಾನಿಕ್ಸ್ ಡಿವೈಸ್, ಮೈಕ್ರೋ ಫೋನ್ ಸೇರಿದಂತೆ ಇನ್ನಿತರೆ ಎಲೆಕ್ಟ್ರಾನಿಕ್ಸ್ ವಸ್ತುಗಳು ಇರದಂತೆ ನೋಡಿಕೊಳ್ಳಬೇಕು.

ಪರೀಕ್ಷಾ ಅವ್ಯವಹಾರ ಮತ್ತು ಕಾನೂನು ಸುವ್ಯವಸ್ಥೆ ತೆಡೆಗಟ್ಟಲು 144 ಸೆಕ್ಷನ್ ಅನ್ವಯ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್‌ವರೆಗೆ ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದ್ದು. ನಿಷೇಧಿತ ವಲಯದಲ್ಲಿ ಜೆರಾಕ್ಸ್ ಹಾಗೂ ಇಂಟರ್‌ನೆಟ್ ಸೆಂಟರ್‌ಗಳನ್ನು ಮುಚ್ಚಲು ಆದೇಶಿಸಲಾಗುತ್ತದೆ. ಸಮಯಕ್ಕೆ ಸರಿಯಾಗಿ ಪರೀಕ್ಷೆ ಆರಂಭವಾಗಬೇಕು ಮತ್ತು ಮುಕ್ತಾಯವಾಗಬೇಕು, ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಎಲ್ಲಾ ಅಧಿಕಾರಿಗಳು ಮುನ್ನಚ್ಚರಿಕೆ ವಹಿಸಲು ಸೂಚನೆ ನೀಡಿದರು. ಸಭೆಯಲ್ಲಿ ಅಪಾರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕರಾದ ಜಿ.ಕೊಟ್ರೇಶ್, ಬಿಸಿಎಂ ಅಧಿಕಾರಿ ಗಾಯತ್ರಿ ಹಾಗೂ ಇನ್ನಿತರೆ ಅಧಿಕಾರಿಗಳು ಉಪಸ್ಥಿರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T